ಸಂಪಾದಕರು: ರವಿಕುಮಾರ್ ಸಿ.ಹೆಚ್.
ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYAPRAGATHI Kannada Daily
ಪ್ರತಿ ಸುದ್ಧಿಯ ಧ್ವನಿ

suryapragathi2021@gmail.com  Mob: 9901010109  RNI:KARKAN/2021/80805  L2/RNP-1285/TMR/2025-27

Volume: 05 ಸಂಪುಟ: 05 | Issue:76 ಸಂಚಿಕೆ: 76 | Date:02-04-2026 Thursday | RNI NO : KARKAN/2021/80805 | L2/RNP-1285/TMR/2025-27 | Page :4 ಪುಟ : 4 | Price: 1.00 ಬೆಲೆ: 1.00 ರೂ

# ಶಿಕ್ಷಣ ವ್ಯಕ್ತಿತ್ವ ನಿರ್ಮಾಣದ ಅಡಿಪಾಯ : ರಾಷ್ಟ್ರಪತಿ ದ್ರೌಪದಿ ಮುರ್ಮು

## ಶ್ರೀ ಮಠ ಕರ್ನಾಟಕ ರಾಷ್ಟ್ರ ನಿರ್ಮಾಣದ ಪ್ರಮುಖ ಕೇಂದ್ರ ; ಭಾಷಣದಲ್ಲಿ ಕುವೆಂಪು ನೆನಪಿಸಿಕೊಂಡ ರಾಷ್ಟ್ರಪತಿ

## ಲಿಂ. ಡಾ: ಶ್ರೀ ಶಿವಕುಮಾರ ಸ್ವಾಮೀಜಿ ಅವರ ಜಯಂತಿ ಉದ್ಘಾಟಿಸಿದ ರಾಷ್ಟ್ರಪತಿ; ಶ್ರೀ ಮಠದ ಶಿಕ್ಷಣ ಕ್ರಾಂತಿಗೆ ರಾಷ್ಟ್ರಪತಿ ಪ್ರಶಂಸೆ





ತುಮಕೂರು: ಶಿಕ್ಷಣ ವ್ಯಕ್ತಿತ್ವ ವಿಕಸನ ಮತ್ತು ವ್ಯಕ್ತಿತ್ವ ನಿರ್ಮಾಣದ ಅಡಿಪಾಯವಾಗಿದೆ ಹಾಗೂ ಶಿಕ್ಷಣವು ಸ್ವಾವಲಂಬನೆಗೆ ದಾರಿ ಮಾಡಿಕೊಡಲಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ತುಮಕೂರಿನ ಸಿದ್ದಗಂಗಾ ಮಠದಲ್ಲಿ ಬುಧವಾರ ಆಯೋಜಿಸಿದ್ದ ಲಿಂಗೈಕ್ಯ ಡಾ: ಶ್ರೀ ಶಿವಕುಮಾರ ಸ್ವಾಮೀಜಿ ಅವರ 119ನೇ ಜನ್ಮ ದಿನಾಚರಣೆ ಹಾಗೂ ಗುರುವಂದನೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಣ ಅಥವಾ ವಿದ್ಯೆ ವ್ಯಕ್ತಿತ್ವ ವಿಕಸನ ಮತ್ತು ವ್ಯಕ್ತಿತ್ವ ನಿರ್ಮಾಣದ ಅಡಿಪಾಯವಾಗಿದ್ದು, ಹಿಂದುಳಿದ ಸಮುದಾಯದ ವಿದ್ಯಾರ್ಥಿಗಳಿಗೆ ಹಾಗೂ ಗ್ರಾಮೀಣ ಪ್ರದೇಶದ ಜನರಿಗೆ ಶಿಕ್ಷಣ ಒದಗಿಸುವ ಮೂಲಕ ಸಮಾಜಕ್ಕೆ ಶ್ರೀ ಸಿದ್ದಗಂಗಾ ಮಠವು ಅತ್ಯಂತ ಅಮೂಲ್ಯ ಕೊಡುಗೆ ನೀಡುತ್ತಿರುವುದು ಅತ್ಯಂತ ಪ್ರಶಂಸನೀಯ ಎಂದು ಅವರು ಅಭಿಪ್ರಾಯಿಸಿದರು.

ಶ್ರೀ ಮಠವು ಬಸವಣ್ಣನವರ ಆದರ್ಶಗಳನ್ನು ಅನುಸರಿಸುವ ಮೂಲಕ ತಾರತಮ್ಯದ ಸಾಮಾಜಿಕ ವ್ಯವಸ್ಥೆ ಮತ್ತು ಸಾರ್ವತ್ರಿಕ ಭಾಗವಹಿಸುವಿಕೆಯ ಆಧಾರದ ಮೇಲೆ ಕಾರ್ಯನಿರ್ವಹಿಸುವ




ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಯ ಕೈಗನ್ನಡಿಯಾಗಿದೆ ಎಂದರು. 'ದಯವೇ ಧರ್ಮದ ಮೂಲವಯ್ಯ' ಎಂಬ ಬಸವಣ್ಣನವರ ಆಶಯದಂತೆ ಸಿದ್ದಗಂಗಾ ಮಠವು ಎಲ್ಲಾ ಸಮುದಾಯದ ಎಲ್ಲಾ ಜನವರ್ಗಗಳಿಗೆ ಅನ್ನ, ಅಕ್ಷರ, ಆಶ್ರಯದ ಮೂಲ ಮಂತ್ರದೊಂದಿಗೆ ಸಂಸ್ಕಾರವನ್ನು ನೀಡುತ್ತಿದೆ. ಎಲ್ಲಾ ನಂಬಿಕೆಗಳ ಆಧಾರ ಕರುಣೆ. ಪ್ರತಿಯೊಬ್ಬ ವ್ಯಕ್ತಿಯ ಹೃದಯದಲ್ಲಿ ಇಡೀ ಪ್ರಪಂಚದ ಬಗ್ಗೆ ಪ್ರೀತಿ ಮತ್ತು ಕರುಣೆಯ ಭಾವನೆ ಇರಬೇಕು. ಈ ನಿಟ್ಟಿನಲ್ಲಿ ಸಿದ್ದಗಂಗೆ ಮಠದ ಲಿಂಗೈಕ್ಯ ಡಾ: ಶಿವಕುಮಾರ ಸ್ವಾಮೀಜಿ ಅವರು ತಮ್ಮ ಜನ್ಮ ಶತಮಾನೋತ್ಸವ ಆಚರಿಸಿದ ನಂತರ ಹಲವು ವರ್ಷಗಳ ಕಾಲ ತಮ್ಮ ಆಧ್ಯಾತ್ಮಿಕ ಚಟುವಟಿಕೆಯಿಂದ ಮಾನವೀಯತೆಯನ್ನು ಶ್ರೀಮಂತಗೊಳಿಸಿದ್ದರು ಎಂದು ಕೇಳಲ್ಪಟ್ಟಿದ್ದೇನೆ. ಬಡವರು ಹಾಗೂ ದುರ್ಬಲರ ಸೇವೆಗೆ ತಮ್ಮ ಇಡೀ ಆಯುಷ್ಯವನ್ನು ಮುಡಿಪಾಗಿಟ್ಟಿದ್ದರು. ರಾಷ್ಟ್ರ ನಿರ್ಮಾಣ, ಲೋಕೋಪಕಾರ ಮತ್ತು ಕರ್ತವ್ಯ ನಿಷ್ಠೆಯ ಮಾರ್ಗವನ್ನು ಅನುಸರಿಸಿದರೆ ಮಾತ್ರ ನಾವು ಶ್ರೀ ಶಿವಕುಮಾರ ಸ್ವಾಮೀಜಿ ಅವರಿಗೆ ನಿಜವಾದ ಗೌರವ ಸಲ್ಲಿಸಿದಂತಾಗುತ್ತದೆ ಎಂದು ಅವರು ಹೇಳಿದರು.

**ಕರ್ನಾಟಕ ರಾಷ್ಟ್ರ ನಿರ್ಮಾಣದ ಪ್ರಮುಖ ಕೇಂದ್ರ:**

ಕಠಿಣ ಪರಿಶ್ರಮ, ಸಾರ್ವಜನಿಕ ಸೇವೆ ಮತ್ತು ರಾಷ್ಟ್ರೀಯ ಸೇವೆ ಪರಸ್ಪರ ಸಂಬಂಧ ಹೊಂದಿವೆ. ಸಾರ್ವಜನಿಕ ಸೇವೆ ಮತ್ತು ರಾಷ್ಟ್ರೀಯ ಸೇವೆಗೆ ಆಧ್ಯಾತ್ಮಿಕತೆಯು ಬಲವಾದ ಅಡಿಪಾಯ ಒದಗಿಸುತ್ತದೆ. ಈ ನಿಟ್ಟಿನಲ್ಲಿ ಕರ್ನಾಟಕವು ಸಾರ್ವಜನಿಕ ಸೇವೆ, ರಾಷ್ಟ್ರೀಯ ಸೇವೆ, ಆಧ್ಯಾತ್ಮಿಕತೆ ಹಾಗೂ ಆಧುನಿಕ ಪ್ರಗತಿಯ ಕೆಲವು ಪ್ರಭಾವಶಾಲಿ ಉದಾಹರಣೆಗಳನ್ನು ನೀಡುತ್ತದೆ. ಇದಕ್ಕಾಗಿ ಕರ್ನಾಟಕದ ಶ್ರಮಶೀಲ ಮತ್ತು ಪ್ರತಿಭಾನ್ವಿತ ನಿವಾಸಿಗಳು ಅಭಿನಂದನೆಗೆ ಅರ್ಹರು. ಕರ್ನಾಟಕದ ಜನರು ನಿರಂತರವಾಗಿ ರಾಷ್ಟ್ರ ನಿರ್ಮಾಣಕ್ಕೆ ಕೊಡುಗೆ ನೀಡಿದ್ದಾರೆ. ಕರ್ನಾಟಕವು ರಾಷ್ಟ್ರ ನಿರ್ಮಾಣದ ಪ್ರಮುಖ ಕೇಂದ್ರವಾಗಬಹುದು ಎಂಬುದು ನನ್ನ ನಂಬಿಕೆ ಎಂದರು.

**ಕುವೆಂಪು ವಿರಚಿತ ನಾಡಗೀತೆಗೆ ರಾಷ್ಟ್ರಪತಿ ನಮನ :**

ವಂದೇ ಮಾತರಂ ರಾಷ್ಟ್ರೀಯ ಗೀತೆಯ ರಚನೆಗೆ 150 ವರ್ಷಗಳು ಸಂದಿದ್ದು, ದೇಶಾದ್ಯಂತ 150ನೇ ವಾರ್ಷಿಕೋತ್ಸವವನ್ನು ಆಚರಿಸುತ್ತಿದ್ದೇವೆ. ಇದೇ ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಕ್ಷೇತ್ರವನ್ನು ಶ್ರೀಮಂತಗೊಳಿಸಿದ ರಾಷ್ಟ್ರಕವಿ ಕುವೆಂಪು ಅವರು ರಚಿಸಿದ ಕರ್ನಾಟಕ ಗೀತೆಯಲ್ಲಿ ಕರ್ನಾಟಕ ಮಾತೆಯನ್ನು ಭಾರತ ಮಾತೆಯ ಮಗಳು ಎಂದು ವರ್ಣಿಸಿರುವುದು ನೆನಪಾಗುತ್ತದೆ ಎಂದ ಅವರು, "ಭಾರತ ಜನನಿಯ ತನುಜಾತೆ, ಜಯಹೇ ಕರ್ನಾಟಕ ಮಾತೆ" ಎಂಬ ಆ ಅಮರ ವಾಣಿಯು ದೇಶ ವಾಸಿಗಳ ಹೃದಯದಲ್ಲಿ ಕರ್ನಾಟಕದ ಬಗ್ಗೆ ಹಾಗೂ ರಾಷ್ಟ್ರೀಯ ಏಕತೆಯ ಬಗ್ಗೆ ಇರುವ ಹೆಮ್ಮೆಯ ಭಾವನೆಯನ್ನು ಜಾಗೃತಗೊಳಿಸುತ್ತದೆ. ಈ ಮೂಲಕ ಗೀತೆಯ ಭಾರತೀಯ ಮೌಲ್ಯಗಳ ಸಮಗ್ರತೆ ಮತ್ತು ಔದಾರ್ಯದ ವಿವರಣೆಯನ್ನು ಒದಗಿಸುತ್ತದೆ. ಇದೇ ಭಾರತೀಯ ಮೌಲ್ಯಗಳು ಲಿಂಗೈಕ್ಯ ಶ್ರೀಗಳ ಅಸಾಧಾರಣ ಕೊಡುಗೆಯಲ್ಲಿಯೂ ಪ್ರತಿಫಲಿಸುತ್ತವೆ ಎಂದರು.

ಶ್ರೀ ಶಿವಕುಮಾರ ಸ್ವಾಮೀಜಿಯವರ ಸತ್ಕಾರ್ಯಗಳ ಪರಂಪರೆಯನ್ನು ಇಂದಿನ ಶ್ರೀಗಳು ಮುಂದುವರೆಸಿಕೊಂಡು ಹೋಗುತ್ತಿದ್ದು, ಮಠದೊಂದಿಗಿನ ಭಕ್ತರ ಬಾಂಧವ್ಯ ಶ್ರೀಮಠದಿಂದ ಗ್ರಾಮೀಣ ಮಕ್ಕಳಿಗೆ ಮತ್ತು ಗ್ರಾಮೀಣ ಜನತೆಗೆ ಸಿಗುತ್ತಿರುವ ತ್ರಿವಿಧ ದಾಸೋಹ ಮತ್ತು ಪ್ರಾಥಮಿಕ ಶಿಕ್ಷಣದಿಂದ ಉನ್ನತ ಶಿಕ್ಷಣದವರೆಗೂ ಸಿಗುತ್ತಿರುವ ವಿಶೇಷ ಸೌಲಭ್ಯಗಳು ಮತ್ತಷ್ಟು ಉನ್ನತ ಮಟ್ಟದಲ್ಲಿ ನಡೆಯಲಿ ಎಂದು ಆಶಿಸಿದ ಅವರು, ಇಂತಹ ಶ್ರೇಷ್ಠ ಕಾರ್ಯಕ್ರಮದಲ್ಲಿ ಭಾಗವಹಿಸಿದ ತಮಗೆ ಅತ್ಯಂತ ಸಂತೋಷದ ದಿನವಾಗಿದೆ ಎಂದರು.

ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ ಮಾತನಾಡಿ, ಲಿಂಗೈಕ್ಯ ಡಾ: ಶ್ರೀ ಶಿವಕುಮಾರ ಸ್ವಾಮೀಜಿ ಅವರು ಆದರ್ಶ ಜೀವಿಗಳು. ಸರಳತೆ ಮತ್ತು ಮಾನವೀಯತೆಯ ಮೂಲಕ ಬಡವರಿಗೆ ತ್ರಿವಿಧ ದಾಸೋಹದ ಮೂಲಕ ಸೇವೆಯನ್ನು ಮಾಡುವ ಮೂಲಕ ಆದರ್ಶಪ್ರಾಯರಾಗಿದ್ದಾರೆ ಎಂದರು.

ಶ್ರೀ ಸಿದ್ದಗಂಗಾ ಮಠವು ಕೇವಲ ಧಾರ್ಮಿಕ ಕೇಂದ್ರವಲ್ಲದೆ, ಇದು ಆಧ್ಯಾತ್ಮಕತೆಯ ಮೂಲಕ ಸಮಾನತೆ ಮತ್ತು ಮಾನವೀಯ ಮೌಲ್ಯವನ್ನು ಬಿತ್ತುವ ಮೂಲಕ ನಿರಂತರ ಸೇವೆಯನ್ನು ಮಾಡುತ್ತಿರುವ ಸಾಮಾಜಿಕ ಕೇಂದ್ರವಾಗಿದೆ ಎಂದರು.

ದಿವ್ಯ ಸಾನಿಧ್ಯವಹಿಸಿಕೊಂಡಿದ್ದ ಶ್ರೀ ಸಿದ್ಧಗಂಗಾ ಮಠದ ಮಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಮಹಾಸ್ವಾಮೀಜಿ ಮಾತನಾಡಿ, 111 ವರ್ಷಗಳ ಸುದೀರ್ಘ ತಮ್ಮ ಜೀವಿತಾವಧಿಯಲ್ಲಿ 79 ವರ್ಷಗಳ ಸುದೀರ್ಘ ಸೇವೆಯನ್ನು ಶ್ರೀ ಶಿವಕುಮಾರ ಸ್ವಾಮೀಜಿ ಅವರು ಸಮಾಜ ಸೇವೆಗಾಗಿಯೇ ಮುಡಿಪಾಗಿಟ್ಟಿದ್ದರು. ಇದು ಅವರ ಆದರ್ಶ, ಆಚಾರ, ವಿಚಾರ, ವಿಸ್ಮಯ, ಪವಾಡ ಎಂದರೆ ತಪ್ಪಾಗಲಾರದು. ಗ್ರಾಮಾಂತರ ಭಾಗದ ಬಡ ಮಕ್ಕಳಿಗೆ, ಹೆಣ್ಣು ಮಕ್ಕಳಿಗೆ ಶಿಕ್ಷಣ ಸಿಗಬೇಕೆಂಬುದು ಶ್ರೀಗಳ ಮಹತ್ತರ ಆಶಯವಾಗಿತ್ತು. ಈ ನಿಟ್ಟಿನಲ್ಲಿ ಭಕ್ತರಿಗೆ ಸನ್ಮಾರ್ಗವನ್ನು ತೋರುವ ಮೂಲಕ ಶ್ರೀ ಮಠವು ನಿರಂತರ ಸೇವೆಯನ್ನು ಮುಂದುವರೆಸಿದೆ ಎಂದರು.

ಕೇಂದ್ರ ಗ್ರಾಹಕ ವ್ಯವಹಾರಗಳು ಮತ್ತು ಆಹಾರ ಸಚಿವ ಪ್ರಹ್ಲಾದ ಜೋಶಿ ಅವರು ಮಾತನಾಡಿ, ಶ್ರೀ ಸಿದ್ಧಗಂಗಾ ಮಠವು ಕೇವಲ ಆಧ್ಯಾತ್ಮಿಕ ಕೇಂದ್ರವಲ್ಲದೆ, ಆಧುನಿಕ ಸಂಶೋಧನಾ ಕೇಂದ್ರವಾಗಿದೆ. ಸಂಸ್ಕಾರವನ್ನು ಕೊಡುವ ಮೂಲಕ ಭಕ್ತರಿಗೆ ಸನ್ಮಾರ್ಗವನ್ನು ತೋರಿಸುವ ವಿಶ್ವದ ಏಕೈಕ ಮಠ. ಇದಕ್ಕೆ ಕಾರಣ ಶ್ರೀ ಶಿವಕುಮಾರ ಸ್ವಾಮೀಜಿ ಅವರಿಗೆ ಹಸಿವಿನ ಅರ್ಥವಾಗಿತ್ತು. ಜಾತಿ, ಧರ್ಮವನ್ನು ಮೀರಿ ಬಡವರು ಹಸಿವಿನಿಂದ ನರಳಬಾರದು. ಹಣವಿಲ್ಲದವರು ಜ್ಞಾನದಿಂದ ವಂಚಿತರಾಗಬಾರದು ಎಂಬ ಧ್ಯೇಯವನ್ನು ಇಟ್ಟುಕೊಂಡಿರುವ ವಿಶ್ವದ ಏಕೈಕ ಮಠ ಇದಾಗಿದೆ. ಈ ಮೂಲಕ ಲಿಂಗೈಕ್ಯ ಶ್ರೀಗಳು ಮನುಷ್ಯನಿಂದ ಮಹಾದೇವರಾದರು ಎಂದರು.

ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ ಅವರು ಗಣ್ಯರನ್ನು ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್, ಸಚಿವರಾದ ಎಂ.ಬಿ. ಪಾಟೀಲ್, ಲಕ್ಷ್ಮೀ ಹೆಬ್ಬಾಳ್ಕರ್ ಉಪಸ್ಥಿತರಿದ್ದರು.

# ಸೇತುವೆಗೆ ಕಾರು ಡಿಕ್ಕಿ : ಒರ್ವ ಸ್ಥಳದಲ್ಲೆ ಸಾವು



ಹುಳಿಯಾರು : ಕಾರೊಂದು ರಸ್ತೆ ಬದಿಯ ಸೇತುವೆಗೆ ಡಿಕ್ಕಿ ಹೊಡೆದ ಪರಿಣಾಮ ಅಪಘಾತಕ್ಕೀಡಾಗಿ ಒರ್ವ ವ್ಯಕ್ತಿ ಸಾವನ್ನಪ್ಪಿ ಉಳಿದವರು ಗಾಯಗೊಂಡಿರುವ ಘಟನೆ ಹೋಬಳಿಯ ಕೋರಗೆರೆ ಬಳಿ ನಡೆದಿದೆ.

ಕಾರು ಸೇತುವೆಗೆ ಹೊಡೆದ ರಬಸಕ್ಕೆ ಬೆಂಕಿ ಹತ್ತಿಕೊಂಡು ಕಾರು ಸಂಪೂರ್ಣವಾಗಿ ಭಸ್ಮವಾಗಿದೆ, ಸ್ಥಳೀಯರ ಸಹಾಯದಿಂದ ಕಾರಿನಲ್ಲಿದ್ದವರನ್ನು ಹೊರಗೆ ಎಳೆದು, ನೀರಿನ ಟ್ರಾಕ್ಟರ್ ನಿಂದ ಬೆಂಕಿಯನ್ನು ನಂದಿಸುವ ಕೆಲಸ ಮಾಡಿದರು ಸಾಧ್ಯವಾಗಿಲ್ಲ. ಕಾರಿನಲ್ಲಿದ್ದವರು ಗುಬ್ಬಿ ತಾಲೂಕಿನ ಹಗಲವಾಡಿ ಬಳಿಯ ಚಿತ್ರದೇವರಹಟ್ಟಿ ಮತ್ತು ಬಿಳಿಕಲ್ಲು ಹಟ್ಟಿ ಗ್ರಾಮದವರು ಎಂದು ತಿಳಿದು ಬಂದಿದ್ದು ಅರಸೀಕೆರೆಯ ತಾಲೂಕಿನ ಅಮ್ಮನಹಟ್ಟಿ ಮಾಳಮ್ಮ ದೇವಸ್ಥಾನಕ್ಕೆ ಹೋಗಿ ಹಿಂದಿರುವಾಗ ಘಟನೆ ಸಂಭವಿಸಿದೆ. ಘಟನಾ ಸ್ಥಳಕ್ಕೆ ಎಸ್ ಪಿ, ಚಿ.ನಾ.ಹಳ್ಳಿ ತಹಸೀಲ್ದಾರ್ ಮಮತ, ವೃತ್ತ ನೀರಿಕ್ಷಕ ಜನಾರ್ದನ್, ಹುಳಿಯಾರು ಪೊಲೀಸರು, ಅಗ್ನಿಶಾಮಕದಳ ಬೇಟಿ ನೀಡಿದ್ದಾರೆ.

## ಶಿವಕುಮಾರ ಸ್ವಾಮೀಜಿಗಳ ಜನ್ಮದಿನೋತ್ಸಕ್ಕೆಂದು ಮಠಕ್ಕೆ ಬಂದಿದ್ದ ಭಕ್ತ ಸಾವು



ತುಮಕೂರಿನ ಸಿದ್ದಗಂಗಾ ಮಠದ ಶ್ರೀ ಶಿವಕುಮಾರ ಸ್ವಾಮೀಜಿಗಳ 119ನೇ ಜನ್ಮದಿನೋತ್ಸವ ಹಿನ್ನೆಲೆಯಲ್ಲಿ ಮಠದಲ್ಲಿ ಸಂಭ್ರಮ ಕಳೆಗಟ್ಟಿದ್ದು, ಮಠಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ ನೀಡಿ, ಲಿಂಗೈಕ್ಯ ಶಿವಕುಮಾರ ಸ್ವಾಮೀಜಿ ಗದ್ದುಗೆಗೆ ಪೂಜೆ ಸಲ್ಲಿಸಿದ್ದಾರೆ. ಇನ್ನು ಶ್ರೀಗಳ ಕಾರ್ಯಕ್ರಮಕ್ಕೆ ಸಿದ್ಧಗಂಗಾ ಮಠಕ್ಕೆ ಬಂದಿದ್ದ ಭಕ್ತರೊಬ್ಬರು ದುರಂತ ಸಾವು ಕಂಡಿದ್ದಾರೆ.

ಡಾ. ಶಿವಕುಮಾರ ಸ್ವಾಮೀಜಿಗಳ 119ನೇ ಜನ್ಮದಿನೋತ್ಸಕ್ಕೆಂದು ತುಮಕೂರಿನ ಸಿದ್ದಗಂಗಾ ಮಠಕ್ಕೆ ಬಂದಿದ್ದ ಭಕ್ತರೊಬ್ಬರು ಸಾವನ್ನಪ್ಪಿದ್ದಾರೆ. ಮೈಸೂರಿನಿಂದ ಸ್ನೇಹಿತರ ಜೊತೆ ಕಾರ್ಯಕ್ರಮಕ್ಕೆ ಆಗಮಿಸಿದ್ದ ನಟರಾಜು(60) ಏಕಾಏಕಿ ಕುಸಿದು ಬಿದ್ದು ಮೃತಪಟ್ಟಿದ್ದಾರೆ. ಮೈಸೂರು ಜಿಲ್ಲೆ ನಂಜನಗೂಡು ತಾಲೂಕಿನ ತಾಯೂರು ನಿವಾಸಿ ನಟರಾಜ್ ಸಿದ್ಧಗಂಗಾ ಮಠದ ಹಳೇ ವಿದ್ಯಾರ್ಥಿಯಾಗಿದ್ದಾರೆ. ಇದರಿಂದ ಪ್ರತಿ ವರ್ಷ ಶಿವಕುಮಾರ್ ಸ್ವಾಮೀಜಿ ಕಾರ್ಯಕ್ರಮಕ್ಕೆ ಬರುತ್ತಿದ್ದರು. ಆದ್ರೆ, ಈ ಬಾರಿ ಮಠದಲ್ಲೇ ಅಸುನೀಗಿದ್ದಾರೆ.

ಮೈಸೂರು ಜಿಲ್ಲೆ ನಂಜನಗೂಡು ತಾಲೂಕಿನ ತಾಯೂರು ನಿವಾಸಿ ನಟರಾಜ್, ಸಿದ್ಧಗಂಗಾ ಮಠದ ಹಳೇ ವಿದ್ಯಾರ್ಥಿ. ಹೀಗಾಗಿ ಪ್ರತಿ ವರ್ಷವೂ ಸಹ ಡಾ. ಶಿವಕುಮಾರ ಸ್ವಾಮೀಜಿಗಳ ಜನ್ಮದಿನೋತ್ಸಕ್ಕೆಂದು ಬರುತ್ತಿದ್ದರು. ಅದರಂತೆ ಶ್ರೀಗಳ 119ನೇ ಜನ್ಮದಿನೋತ್ಸ ಕಾರ್ಯಕ್ರದಲ್ಲಿ ಪಾಲ್ಗೊಳ್ಳಲು ಸ್ನೇಹಿತರೊಂದಿಗೆ ನಿನ್ನೆ (ಮಾರ್ಚ್ 31) ರಾತ್ರಿ ಸಿದ್ಧಗಂಗಾ ಮಠಕ್ಕೆ ಬಂದಿದ್ದರು. ಆದ್ರೆ, ದುರದೃಷ್ಟವಶಾತ್ ಇಂದು (ಏಪ್ರಿಲ್ 01) ಶೌಚಾಲಯಕ್ಕೆ ಹೋಗಿ ಬರುವಾಗ ಶಿವಕುಮಾರ ಶ್ರೀಗಳ ಗದ್ದುಗೆ ಹಿಂಭಾಗದಲ್ಲಿ ಏಕಾಏಕಿ ಎದೆನೋವು ಕಾಣಿಸಿಕೊಂಡು ಕುಸಿದುಬಿದ್ದು ಸಾವನ್ನಪ್ಪಿದ್ದಾರೆ.

ಪ್ರತಿವರ್ಷ ಶಿವಕುಮಾರ ಶ್ರೀಗಳ ಕಾರ್ಯಕ್ರಮಕ್ಕೆ ಬರುತ್ತಿದ್ದ ನಟರಾಜ್ ಅವರಿಗೆ ಕೆಲ ದಿನಗಳ ಹಿಂದೆ ಹಾರ್ಟ್ ಸರ್ಜರಿತಾಗಿತ್ತು ಎಂದು ತಿಳಿದುಬಂದಿದೆ. ಇನ ಘಟನಾ ಸ್ಥಳಕ್ಕೆ ಕ್ಯಾತಸಂದ್ರ ಠಾಣೆ ಪೊಲೀಸರ ಭೇಟಿ ಪರಿಶೀಲನೆ ನಡೆಸಿದ್ದಾರೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ದಾಖಲೆ ಇಲ್ಲದಿದ್ದರೆ ಆಟೋ ಸೀಜ್:

## ನಿಯಮ ಮೀರಿದರೆ ಕಠಿಣ ಕ್ರಮದ ಎಚ್ಚರಿಕೆ



ಪಾವಗಡ: ಪಟ್ಟಣದ ಆಟೋ ಚಾಲಕರು ರಸ್ತೆ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಮತ್ತು ವಾಹನಕ್ಕೆ ಸಂಬಂಧಿಸಿದ ಅಗತ್ಯ ದಾಖಲೆಗಳನ್ನು ಹೊಂದಿರಬೇಕು. ಈ ನಿಟ್ಟಿನಲ್ಲಿ ನಿರ್ಲಕ್ಷ್ಯ ವಹಿಸುವ ಚಾಲಕರಿಗೆ ಏಪ್ರಿಲ್ 15ರವರೆಗೆ ಅಂತಿಮ ಗಡುವು ನೀಡಲಾಗಿದ್ದು, ಆನಂತರ ನಿಯಮ ಉಲ್ಲಂಘಿಸುವ ಆಟೋಗಳನ್ನು ನೇರವಾಗಿ ವಶಪಡಿಸಿಕೊಳ್ಳಲಾಗುವುದು (ಖಜುದಜ) ಎಂದು ವೃತ್ತ ನಿರೀಕ್ಷಕರಾದ (ಅಕಖ) ಕೆ. ಸುರೇಶ್ ಅವರು ಎಚ್ಚರಿಕೆ ನೀಡಿದ್ದಾರೆ.ಬುಧವಾರ ಪಾವಗಡ ಪಟ್ಟಣದ ಪೊಲೀಸ್ ಠಾಣೆ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಆಟೋ ಚಾಲಕರ ವಿಶೇಷ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು ದಾಖಲೆಗಳಿಲ್ಲದಿದ್ದರೆ ಸಂಕಷ್ಟ ತಪ್ಪದು ಚಾಲಕರು ಆಟೋ ಚಾಲನೆಗೆ ಸಂಬಂಧಿಸಿದ ಚಾಲನಾ ಪರವಾನಗಿ (ಆಐ), ಎಫ್.ಸಿ (ಈಅ), ವಿಮೆ (ಖಚಿಣಡಿಚಿಟಟಿಜ) ಮತ್ತು ಪರ್ಮಿಟ್ ಸೇರಿದಂತೆ ಎಲ್ಲಾ ಕಾಯ್ದೆಬದ್ಧ ದಾಖಲೆಗಳನ್ನು ಏಪ್ರಿಲ್ 15ರ ಒಳಗಾಗಿ ಸರಿಪಡಿಸಿಕೊಳ್ಳಬೇಕು. "ಈ ಅವಧಿಯ ನಂತರ ದಾಖಲೆಗಳಿಲ್ಲದೆ ರಸ್ತೆಗಿಳಿಯುವ ಆಟೋಗಳ ಮೇಲೆ ಕೇವಲ ದಂಡ ವಿಧಿಸುವುದಲ್ಲದೆ, ನೇರವಾಗಿ ಕೇಸ್ ದಾಖಲಿಸಿ ವಾಹನಗಳನ್ನು ಸೀಜ್ ಮಾಡಲಾಗುವುದು," ಎಂದು ಸಿಪಿಐ ಅವರು ಖಡಕ್ ಆಗಿ ತಿಳಿಸಿದರು.ಸುರಕ್ಷತೆ ಮತ್ತು ಸಮವಸ್ತ್ರ ಕಡ್ಡಾಯ ಚಾಲಕರು ಕಡ್ಡಾಯವಾಗಿ ನಿಗದಿತ ಸಮವಸ್ತ್ರ ಧರಿಸಿರಬೇಕು ಮತ್ತು ಪ್ರಯಾಣಿಕರ ಸುರಕ್ಷತೆಗೆ ಮೊದಲ ಆದ್ಯತೆ ನೀಡಬೇಕು. ಆಟೋಗಳಲ್ಲಿ ನಿಗದಿತ ಮಿತಿಗಿಂತ ಹೆಚ್ಚು ಪ್ರಯಾಣಿಕರನ್ನು ಕೂರಿಸುವುದು ಕಂಡುಬಂದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದು. ಸಾರ್ವಜನಿಕರು ಹಾಗೂ ಪ್ರಯಾಣಿಕರೊಂದಿಗೆ ಸೌಜನ್ಯದಿಂದ ವರ್ತಿಸುವುದು ಅತ್ಯಗತ್ಯ ಎಂದು ಅವರು ಸೂಚನೆ ನೀಡಿದರು.ಅಹವಾಲು ಆಲಿಕೆ ಇದೇ ಸಂದರ್ಭದಲ್ಲಿ ಆಟೋ ಚಾಲಕರು ಎದುರಿಸುತ್ತಿರುವ ನಿಲ್ದಾಣದ ಸಮಸ್ಯೆ ಮತ್ತು ಮೂಲಭೂತ ಸೌಕರ್ಯಗಳ ಕುರಿತಾದ ಅಹವಾಲುಗಳನ್ನು ಸಿಪಿಐ ಆಲಿಸಿದರು. ಚಾಲಕರ ಸಮಸ್ಯೆಗಳ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ಸೂಕ್ತ ಪರಿಹಾರ ಕಲ್ಪಿಸುವ ಭರವಸೆಯನ್ನು ಈ ವೇಳೆ ನೀಡಿದರು ಸಭೆಯಲ್ಲಿ ಪಟ್ಟಣದ ನೂರಾರು ಆಟೋ ಚಾಲಕರು ಹಾಗೂ ಪೊಲೀಸ್ ಸಿಬ್ಬಂದಿ ಉಪಸ್ಥಿತರಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

# ಶ್ರೀ ಮದನಘಟ್ಟಮ್ಮ ದೇವಿ ಜಾತ್ರಾ ಮಹೋತ್ಸವ



ಶ್ರೀ ಮದನಘಟ್ಟಮ್ಮ ದೇವಿ ಜಾತ್ರಾ ಮಹೋತ್ಸವ ನಿಟ್ಟೂರ ಹೋಬಳಿ ಗುಬ್ಬಿ ತಾಲೂಕು ಐತಿಹಾಸಿಕ ಪ್ರಸಿದ್ಧ ಶ್ರೀ ಕೆಂಪುಮುಖದ ಚೆಲುವೆ ಉದ್ಭವ ದೇವಿ ದೊಡ್ಡಮ್ಮ ದೇವಿ ಹಾಗೂ ಶ್ರೀ ಬೆಳ್ಳಿಮುಖಿ ಚಿಕ್ಕಮ್ಮ ದೇವಿ ಯವರ ಅದ್ದೂರಿ ಜಾತ್ರಾ ಮಹೋತ್ಸವ ಹಾಗೂ ನೂತನ ಕಲ್ಲು ಗಾಲಿ ರಥೋತ್ಸವ ಇದೇ ತಿಂಗಳ 07/04/2026 ರಿಂದ 10/04/2026ರವರೆಗೂ ನಡೆಯಲಿದೆ. ಜಾತ್ರಾಮಹೋತ್ಸವದಲ್ಲಿ ಕಳಸ ಸ್ಥಾಪನೆ ಸಹಿತ ಹೊಸ ಗಂಗಾಪೂಜೆ, ವಿಶೇಷವಾಗಿ ಕಿಡಿಗಣ್ಣ ರುದ್ರೀ ಬೆಳ್ಳಿಮುಖಿ ಅಮ್ಮನವರನ್ನು ಸಾಂಪ್ರದಾಯಿಕ ಕತ್ತಿ ವರೆಸೆಯ ಮೂಲಕ ಕಣದಿಂದ ಬರಮಾಡಿಕೊಂಡು,,,, ಸೋಮನ ಕುಣಿತ ಸಹಿತ ಹಲವಾರು ಸಾಂಸ್ಕೃತಿಕ ಕಾರ್ಯಕ್ರಮಗಳ ಏರ್ಪಡಿಸಲಾಗಿದೆ. ಕನಸಿನ ಕೂಸಾದ ಅಮ್ಮನವರ ರಥೋತ್ಸವ 09/04/2026 ಗುರುವಾರ ವೃಷಭ ಲಗ್ನ ಸುಸಮಯದಲ್ಲಿ ನಡೆಯಲಿದೆ. ಮೂರು ದಿನಗಳ ಮಹಾ ದಾಸೋಹವಿರುತ್ತದೆ.ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ಅಮ್ಮನವರ ಕೃಪೆಗೆ ಪಾತ್ರರಾಗಬೇಕಾಗಿ ಪ್ರಕಟಣೆಯಲ್ಲಿ ಕೋರಿದೆ

## ವಿಶೇಷ ಮನವಿ

ಎಲ್ಲೆಡೆ ಈಗಾಗಲೇ ಬೇಸಿಗೆ ಆರಂಭವಾಗಿದ್ದು ಪ್ರಾಣಿ, ಪಕ್ಷಿಗಳು ನೀರಿನ ದಾಹದಿಂದ ಬಳಲುತ್ತಿರುತ್ತವೆ ಹಾಗಾಗಿ ಸಮಸ್ತ ನಾಡಿನ ಎಲ್ಲಾ ಜನರಲ್ಲಿ ಒಂದು ವಿನಂತಿ ನಿಮ್ಮ ಮನೆ ಮೇಲೆ ಅಕ್ಕ–ಪಕ್ಕ ಪ್ರಾಣಿ ಪಕ್ಷಿಗಳು ಬರುವ ಕಡೆಗಳಲ್ಲಿ ತೆರೆದ ಡಬ್ಬಿಗಳಲ್ಲಿ ನೀರನ್ನ ಇಟ್ಟು ಪುಣ್ಯ ಕಟ್ಟಿಕೊಳ್ಳಿ

–ಸಂಪಾದಕ

# ಮೂರ್ಖರ ದಿನಾಚರಣೆ: ವ್ಯಂಗ್ಯಚಿತ್ರ ಪ್ರದರ್ಶನ



ತುಮಕೂರು: ನಗೆಮಲ್ಲಿಗೆ ಬಳಗವು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಸಹಯೋಗದಲ್ಲಿ ನಗರದ ಕನ್ನಡ ಭವನದಲ್ಲಿ ಏಪ್ರಿಲ್ 1ರಂದು ಬುಧವಾರ ಮೂರ್ಖರ ದಿನಾಚರಣೆ, ನಗೆಮಲ್ಲಿಗೆ ಸಂಸ್ಥಾಪಕರಾದ ಗೌಡನಕಟ್ಟೆ ತಿಮ್ಮಯ್ಯ ಪ್ರದತ್ತಿ ಪ್ರದಾನ ಸಮಾರಂಭದ ಅಂಗವಾಗಿ ವ್ಯಂಗ್ಯಚಿತ್ರ ಪ್ರದರ್ಶನ ಏರ್ಪಡಿಸಿತ್ತು.

ನಗೆಮಲ್ಲಿಗೆ ಬಳಗ ಅಧ್ಯಕ್ಷೆ ಬಾ.ಹ. ರಮಾಕುಮಾರಿ ಹಾಗೂ ನಿವೃತ್ತ ಗ್ರಂಥಾಲಯ ಅಧಿಕಾರಿ ಡಿ.ವಿ. ಶೇಷಾಚಲ ವ್ಯಂಗ್ಯಚಿತ್ರ ಪ್ರದರ್ಶನ ಉದ್ಘಾಟಿಸಿದರು.ಹಿರಿಯ ವ್ಯಂಗ್ಯಚಿತ್ರಕಾರರಾದ ಪಮ್ಮಿ(ಪರಮೇಶ್), ಸಂಕೇತ್ ಗುರುದತ್, ಪಿ. ಪ್ರಸಾದ್, ದಯಾನಂದ್, ಚಂದ್ರಶೇಖರ್, ನಗೆಮಲ್ಲಿಗೆ ಬಳಗದ ಎಂ.ಕೆ. ನಾಗರಾಜರಾವ್, ಜಿ.ಎನ್. ರಾಧಾಕೃಷ್ಣ, ವಿಶ್ವನಾಥ್ ಸ್ವದೇಶಿ, ಅಬ್ಬಿನಹೊಳೆ ಸುರೇಶ್, ಗೌ.ತಿ. ರಂಗನಾಥ್, ವೆನ್ನೆಲ ಕೃಷ್ಣ, ಹರೀಶ್‌ಕುಮಾರ್ ಮೊದಲಾದವರು ಭಾಗವಹಿಸಿದ್ದರು.

# ಕನ್ನಡ ತಾಯಿ ಭಾಷೆ ಅದಕ್ಕೆ ಸದಾ ಮೊದಲನೆಯ ಸ್ಥಾನ ಕರ್ನಾಟಕದ ಶೈಕ್ಷಣಿಕ ಭಾಷಾ ನೀತಿ

ಭಾಷೆ, ಪ್ರಾದೇಶಿಕತೆ, ರಾಷ್ಟ್ರೀಯತೆ ಮತ್ತು ಧರ್ಮದ ಸಂಘರ್ಷ, ಪ್ರಾದೇಶಿಕ ಮತ್ತು ರಾಷ್ಟ್ರೀಯ ಪಕ್ಷಗಳ ಸ್ವಾರ್ಥದ ಅನುಕೂಲಕರ ರಾಜಕೀಯ.....

ಕನ್ನಡ ತಾಯಿ ಭಾಷೆ. ಅದಕ್ಕೆ ಸದಾ ಮೊದಲನೆಯ ಸ್ಥಾನ.

ಎರಡನೆಯದು ಇಂಗ್ಲೀಷ್, ವ್ಯಾವಹಾರಿಕತೆ, ಉದ್ಯೋಗ, ಜ್ಞಾನಾರ್ಜನೆ ಮತ್ತು ಬಹುತೇಕ ವಿಶ್ವ ಮಾನ್ಯತೆ ಪಡೆದ ಮಾಹಿತಿಯ ಕಣಜವಾಗಿರುವ ಭಾಷೆ..

ಉರ್ದು, ಸಂಸ್ಕೃತ ಕೆಲವು ಸಮುದಾಯಗಳಿಗೆ ಮಾತ್ರ ಸೀಮಿತ....

ಹಿಂದಿ ಭಾರತದ ಬಹುಸಂಖ್ಯಾತ ಜನರ ಭಾಷೆಯಾದರೂ ಉದ್ಯೋಗ ಮತ್ತು ರಾಜಕೀಯ ದೃಷ್ಟಿಯಿಂದ ಅತ್ಯಂತ ಪ್ರಬಲವಾದ ದಾಯಾದಿ ಭಾಷೆ ಹಾಗೂ ಮೇಲಿನಿಂದ ಒತ್ತಾಯಪೂರ್ವಕ ಹೇರಿಕೆ ಆಗುತ್ತದೆ. ಅದರಿಂದಾಗಿ ನಮ್ಮ ತಾಯಿ ಭಾಷೆಯ ಮೇಲೆ ಒತ್ತಡ. ಕೇಂದ್ರ ಸರ್ಕಾರ ಉದ್ಯೋಗಗಳಲ್ಲಿ ತಾಯಿ ಭಾಷೆಯವರಿಗೆ ಅನ್ಯಾಯ.

ನಿನ್ನೆ ಮೊನ್ನೆಯಷ್ಟೇ ಕರ್ನಾಟಕ ಸರ್ಕಾರ ಪಾಸ್ ವಿಥೌಟ್ ಹಿಂದಿ ಅಂದರೆ ಹಿಂದಿಯನ್ನು ಶಾಲೆಗಳಲ್ಲಿ ಮೂರನೇ ಭಾಷೆಯಾಗಿ ಕಲಿಯಬಹುದು, ಆ ದರೆ ಅದರ ಅಂಕಗಳನ್ನು ಯಾವುದೇ ಮಾನದಂಡವಾಗಿ ತೆಗೆದುಕೊಳ್ಳುವುದಿಲ್ಲ. ಅದಕ್ಕೆ ಗ್ರೇಡ್ ನೀಡಲಾಗುತ್ತದೆ. ಆದರೆ ಭಾಷೆ ಕಲಿಕೆಗೆ ಒತ್ತಡವಿಲ್ಲ, ನಿರ್ಲಕ್ಷ್ಯವೂ ಇಲ್ಲ, ಅಂಕಗಳನ್ನು ಮಾತ್ರ ಪರಿಗಣಿಸುವುದಿಲ್ಲ ಎಂದು ಆದೇಶ ಹೊರಡಿಸಿದೆ.

ಕನ್ನಡ ಭಾಷೆಯ ಅನೇಕ ಹೋರಾಟಗಾರರು, ಸಾಮಾನ್ಯ ಜನರಿಗೆ ಇದೊಂದು ಅತ್ಯುತ್ತಮ ನಿರ್ಧಾರ. ಅವರ ಹೋರಾಟಗಳಿಗೆ ಸಿಕ್ಕ ಬಹುದೊಡ್ಡ ಪ್ರತಿಫಲ, ಕನ್ನಡ ಭಾಷೆಯ ಅಭಿವೃದ್ಧಿಯ ದೃಷ್ಟಿಯಿಂದ ಮಹತ್ವದ ಘೋಷಣೆ. ಆದರೆ ರಾಷ್ಟ್ರೀಯ ಪಕ್ಷದೊಂದಿಗೆ ಗುರುತಿಸಿಕೊಂಡ ಕೆಲವರಿಗೆ ಇದೊಂದು ಅನ್ಯಾಯ, ಅಕ್ರಮ, ದೌರ್ಜನ್ಯ, ಬೇಜವಾಬ್ದಾರಿ ಆದೇಶ. ಅದರ ಬಗ್ಗೆ ಅವರ ಆಕ್ರೋಶ.

ಈ ಭಾಷಾ ನೀತಿಯನ್ನು ನಾವುಗಳು ನಮ್ಮ ತಾಯಿ ಭಾಷೆಯ ಸ್ವಾರ್ಥದಿಂದ ಮಾತ್ರ ನೋಡಿದರೆ ಅರ್ಥವಾಗುವುದಿಲ್ಲ. ಇದನ್ನು ಸಮಗ್ರವಾಗಿ, ಐತಿಹಾಸಿಕವಾಗಿ, ಮೂಲ ನಿವಾಸಿಗಳ ಸಾಂಸ್ಕೃತಿಕ ಅಸ್ಮಿತೆಯಾಗಿ, ಈ ಕ್ಷಣದ ಅನಿವಾರ್ಯತೆ, ರಾಜಕೀಯ ಭವಿಷ್ಯ, ಭಾಷಾ ಸಾಮರ್ಥ್ಯ ಎಲ್ಲವನ್ನು ಪರಿಗಣಿಸಿ ಯೋಚಿಸಬೇಕಾಗುತ್ತದೆ. ಕೇವಲ ಭಾವನಾತ್ಮಕ ಭಾವದಿಂದ ನೋಡಿದರೆ ಸಮಗ್ರ ಚಿತ್ರಣ ದೊರೆಯುವುದಿಲ್ಲ. ಎಲ್ಲರಿಗೂ ಅವರವರದೇ ದೃಷ್ಟಿಕೋನವಿರುತ್ತದೆ. ಈ ಘೋಷಣೆಯಲ್ಲಿ ಇರಬಹುದಾದ ತಾಂತ್ರಿಕ ದೋಷಗಳನ್ನೇ ಮುಂದೆ ಮಾಡಿ ನೋಡದೆ ದೂರ ದೃಷ್ಟಿಯಿಂದ ನೋಡಬೇಕಾಗುತ್ತದೆ...

ತ್ರಿಭಾಷಾ ಸೂತ್ರ ಎಷ್ಟು ಸರಿ........ ದ್ವಿಭಾಷಾ ಸೂತ್ರ ಉತ್ತಮವೇ......

ಕನ್ನಡ : ರಾಜ್ಯ ಭಾಷೆ.... ಹಿಂದಿ : ರಾಷ್ಟ್ರ ಭಾಷೆ....

ಇಂಗ್ಲೀಷ್ : ಅಂತರರಾಷ್ಟ್ರೀಯ ಭಾಷೆ.....

ಈ ಭಾಷಾ ಸೂತ್ರ ಸರಿಯೇ ? ಇದು ಸಂವಿಧಾನಾತ್ಮಕವೇ ?

ಇದು ವಾಸ್ತವವೇ ?ಪ್ರಾಯೋಗಿಕವೇ ?

ಕನ್ನಡದ ಹಿತಕ್ಕೆ ಇದು ಒಳ್ಳೆಯದೇ ಅಥವಾ ಮಾರಕವೇ ?

ಭಾರತದ ಒಕ್ಕೂಟ ವ್ಯವಸ್ಥೆಗೆ ಇದು ಹಿತವೇ ಅಥವಾ ಅಪಾಯಕಾರಿಯೇ ?

ಭಾಷಾ ಅಸ್ಮಿತೆ ಮತ್ತು ದೇಶದ ಅಸ್ಮಿತೆಗೆ ಇದು ಪೂರಕವೇ ವಿರುದ್ಧವೇ ಸಾಂಸ್ಕೃತಿಕ, ಆರ್ಥಿಕ, ಸಾಮಾಜಿಕ ಮತ್ತು ಶೈಕ್ಷಣಿಕ ಸಾಮರಸ್ಯಕ್ಕೆ ಉಪಕಾರವೇ ? ವಿನಾಶವೇ ?....

ನೀವು ಅಪ್ಪಟ ಕನ್ನಡ ಅಭಿಮಾನಿಗಳೇ ಆಗಿರಲಿ,

ನೀವು ಭಾವುಕ ದೇಶಭಕ್ತರೇ ಆಗಿರಲಿ,

ನೀವು ಹಿಂದಿ ಭಾಷೆಯ ಪಂಡಿತರೇ ಆಗಿರಲಿ,

ನೀವು ಸಹಜ ಸ್ವಾಭಾವಿಕ ಸಾಮಾನ್ಯ ಪ್ರಜೆಗಳೇ ಆಗಿರಲಿ ಮತ್ತು ಏನೇ ಆಗಿರಲಿ ಈ ವಿಷಯದ ಬಗ್ಗೆ ಸ್ಪಷ್ಟ ಅಭಿಪ್ರಾಯ ರೂಪಿಸಿಕೊಳ್ಳುವ ಮೊದಲು ಕೆಲವು ಪ್ರಶ್ನೆಗಳಿಗೆ ಸೂಕ್ತ ಉತ್ತರ ಹುಡುಕಿಕೊಂಡಾಗ ಮಾತ್ರ ಈ ವಿಷಯದ ವಾಸ್ತವದ ಹತ್ತಿರಕ್ಕೆ ಹೋಗಬಹುದು. ಅದನ್ನು ಸಮಷ್ಟಿ ಪ್ರಜ್ಞೆಯ ದೃಷ್ಟಿಕೋನ ಎಂದು ಕರೆಯಲಾಗುತ್ತದೆ.

1) ಹಿಂದಿ ಭಾಷೆಯನ್ನು ಭಾರತದ ಎಲ್ಲಾ ರಾಜ್ಯಗಳಲ್ಲೂ ಒಂದು ಕಡ್ಡಾಯ ಭಾಷೆಯಾಗಿ ಕಲಿಸುವ ಒತ್ತಾಯ ಹೇರಿದರೆ ಆಗುವ ಪರಿಣಾಮಗಳು ಏನು ?



2) ಸಂವಿಧಾನದಲ್ಲಿ ಹಿಂದಿ ಕನ್ನಡ ಸೇರಿ ಸುಮಾರು 22 ಭಾಷೆಗಳಿಗೆ ಸಮನಾದ ಪ್ರಾದೇಶಿಕ ಸ್ಥಾನ ನೀಡಿರುವಾಗ ಹಿಂದಿ ಹೇರಿಕೆಯ ಅವಶ್ಯಕತೆ ಇದೆಯೇ ?

3) ಹಿಂದಿ ಭಾಷೆಯ ಒತ್ತಡಕ್ಕೆ ಸಿಲುಕಿಯೂ ಪ್ರಾದೇಶಿಕ ಭಾಷೆಗಳು ನಿಜಕ್ಕೂ ನಾಶವಾಗದೆ ಕನಿಷ್ಠ ಈಗಿನ ಸ್ಥಿತಿಯನ್ನು ಕಾಪಾಡಿಕೊಳ್ಳಲು ಸಾಧ್ಯವೇ ?

4) ಹಿಂದಿ ಭಾಷೆಯ ಸ್ಪರ್ಧೆಯನ್ನು ಸಹಿಸಿಕೊಳ್ಳಲಾರದಷ್ಟು ದುರ್ಬಲವೇ ಈ ಭಾಷೆಗಳು ? ಸ್ಪರ್ಧಾತ್ಮಕ ಜಗತ್ತಿನಲ್ಲಿ ಎಷ್ಟೇ ಭಾಷೆ ಬಂದರು ನಮ್ಮ ಭಾಷೆಯಲ್ಲಿ ಸಾಮರ್ಥ್ಯ ಮತ್ತು ನಂಬಿಕೆ ಅಚಲವಾಗಿದ್ದರೆ ಭಯಪಡುವುದೇಕೆ ?

5) ಜನಸಂಖ್ಯೆಯ ಆಧಾರದಲ್ಲಿ ಸ್ವಲ್ಪ ಹೆಚ್ಚು ಜನ ಮಾತನಾಡುತ್ತಾರೆ ಎಂಬ ಕಾರಣದಿಂದಾಗಿ ಹಿಂದಿ ರಾಷ್ಟ್ರ ಭಾಷೆಯಾಗಬೇಕು ಎಂಬುದು ಈ ಪ್ರಜಾಸತ್ತಾತ್ಮಕ ಒಕ್ಕೂಟ ವ್ಯವಸ್ಥೆಯಲ್ಲಿ ಒಪ್ಪುವಂತ ವಿಷಯವೇ ?

6) ಪ್ರಾದೇಶಿಕ ಭಾಷೆಗಳಲ್ಲಿ ಇಲ್ಲದ ಆದರೆ ಹಿಂದಿ ಭಾಷೆಯಲ್ಲಿ ಮಾತ್ರ ಇರುವ ವಿಶೇಷತೆ ಏನು ? ಮತ್ತು ಅದರಿಂದಾಗಿ ಆಡಳಿತಾತ್ಮಕ , ಸಾಂಸ್ಕೃತಿಕ ಮತ್ತು ದೇಶದ ಐಕ್ಯತೆಯನ್ನು ಹೆಚ್ಚಿಸುವ ಅಂಶಗಳು ಹಿಂದಿಯಲ್ಲಿ ಇದೆಯೇ ? ಹಿಂದಿಯಿಂದ ದೇಶದ ಆಡಳಿತ ಸುಗಮವಾಗುವುದೇ ? ದೇಶದ ಅನಕ್ಷರಸ್ಥರ ಸಂಖ್ಯೆ ನೆನಪಿದೆಯೇ ?

7) ಹಿಂದಿ ಭಾಷೆಯನ್ನು ರಾಷ್ಟ್ರೀಯ ಭಾಷೆ ಎಂದು ಘೋಷಿಸಬೇಕು ಎಂದು ಹೇಳುತ್ತಿರುವವರು ವಿದ್ವಾಂಸರೇ – ತತ್ವಜ್ಞಾನಿಗಳೇ – ಭಾಷಾ ಪಂಡಿತರೇ – ಭಾರತದ ಸಾಂಸ್ಕೃತಿಕ ವಕ್ತಾರರೇ ? ಜಗದ್ವಿಖ್ಯಾತ ಸಂಶೋದಕರೇ? ಅಥವಾ ಕೇವಲ ಅಧಿಕಾರ ಹೊಂದಿರುವ ರಾಜಕಾರಣಿಗಳೇ ?

8) ಭಾಷೆ ಒಂದು ಸಂವಹನ ಕಲೆ ಮಾತ್ರವೇ ? ಅಥವಾ ಭಾಷೆ ದೇಹದ ಒಂದು ಭಾಗವೇ ? ನಮ್ಮ ನಡವಳಿಕೆ ಸ್ವರೂಪವೇ ? ನಮ್ಮ ಸಂಸ್ಕೃತಿಯ ಜೀವನಾಡಿಯೇ ? ನಮ್ಮ ಅನ್ನ ಮಾರ್ಗವೇ ? ಒಂದು ವ್ಯಕ್ತಿತ್ವವೇ ?

9) ಬದುಕಲು ಯಾವ ಭಾಷೆಯಾದರೇನು ? ಹೇಗೋ ಬದುಕಿದರೆ ಸಾಕು ಎಂದು ದಿವ್ಯ ನಿರ್ಲಕ್ಷ್ಯ ವಹಿಸಬಹುದಾದ ಹಿಂದಿ ಹೇರಿಕೆಯನ್ನು ಒಪ್ಪಿಕೊಳ್ಳುವಷ್ಟು ಸಣ್ಣ ವಿಷಯವೇ ಇದು ?

9) ಅಕಸ್ಮಾತ್ ಕೆಲವು ಕನ್ನಡ ಹೋರಾಟಗಾರರು ಕೋಪದಲ್ಲಿ ಒಂದಷ್ಟು ಆಕ್ರೋಶವಾಗಿ ಮಾತನಾಡಬಹುದು, ಜೀವನೋಪಾಯಕ್ಕಾಗಿ ಬಹುಭಾಷೆಯನ್ನು ಬಳಸುತ್ತಿರಬಹುದು, ಹಿಂದಿ ಹೇರಿಕೆಯನ್ನು ವಿರೋಧಿಸುವವರು ತಮ್ಮ ಮಕ್ಕಳನ್ನು ಇಂಗ್ಲೀಷ್ ಮಾಧ್ಯಮ ಶಾಲೆಗೆ ಸೇರಿಸಿರಬಹುದು, ಕನ್ನಡ ಅಭಿಮಾನಿಗಳು ಹಿಂದಿ ಸಿನಿಮಾಗಳನ್ನೇ ಹೆಚ್ಚಾಗಿ ನೋಡಬಹುದು ಎಂಬ ಈ ಕಾರಣ ಮತ್ತು ನೆಪಗಳನ್ನು ಹೇಳಿ ಮತ್ತು ಅವರ ಆತ್ಮಶಕ್ತಿ – ವಾದ ಸಮರ್ಥನೆಯಲ್ಲಿ ಅಸಮರ್ಥರನ್ನಾಗಿ ಮಾಡಿ ( ಆ – ಒಔಖಂಐಖಖಇ ) ಅತ್ಯಂತ ಮಹತ್ವದ ಕನ್ನಡದ ಮೇಲೆ ಹಿಂದಿ ಹೇರಿಕೆಯನ್ನು ಸಮರ್ಥಿಸಿಕೊಳ್ಳಬಹುದೇ ? ಇಂತಹ ಸಂದರ್ಭದಲ್ಲಿ ನಮ್ಮಲ್ಲಿ ಒಡಕು ಮೂಡುವುದು ಸರಿಯೇ ? ಕೆಲವು ಲೋಪಗಳನ್ನು ಪ್ರತ್ಯೇಕವಾಗಿ ಚರ್ಚಿಸಬಹುದಲ್ಲವೇ ?

11) ನಮ್ಮ ದೇಶವನ್ನು ಆಳಿ – ಕೊಳ್ಳೆ ಹೊಡೆದು ಕೊಡಬಾರದ ಕಷ್ಟ ಕೊಟ್ಟು ಇಲ್ಲಿಂದ ಪರಾರಿಯಾದ ಪರಕೀಯ ಭಾಷೆ ಮತ್ತು ನಮ್ಮ ದೇಶದ ಎಲ್ಲಾ ರಾಜ್ಯಗಳ ಬಹುತೇಕ ಶಿಕ್ಷಣ ಸಂವಹನ ಆಕರ್ಷಕ ಉದ್ಯೋಗದಾತ ಮತ್ತು ಪ್ರತಿಷ್ಠೆ ಎನಿಸಿಕೊಂಡಿರುವ ಇಂಗ್ಲೀಷ್ ಭಾಷೆಯೇ ವ್ಯಾಪಕವಾಗಿರುವಾಗ ನಮ್ಮ ನೆಲದ ಹಿಂದಿ ಭಾಷೆಯ ಹೇರಿಕೆಯನ್ನು ವಿರೋಧಿಸುವುದು ಸರಿಯೇ ?

12) ಎಚ್ಚರಿಕೆಯಿಂದ ಗಮನಿಸಬೇಕಾದ ಅಂಶವೆಂದರೆ, ಇಂಗ್ಲೀಷ್ ಭಾಷೆಯನ್ನು ಸರ್ಕಾರದ ಯಾವುದಾದರೂ ಆಡಳಿತ ಒತ್ತಾಯಪೂರ್ವಕವಾಗಿ ಹೇರಿದರೆ ಅಥವಾ ಸ್ವತಃ ಕನ್ನಡ ಹಿಂದಿ ಮುಂತಾದ ಮಾಧ್ಯಮ ಶಾಲೆಗಳು ಇದ್ದರೂ ಜನರೇ ತಮ್ಮ ಸ್ವ ಇಚ್ಛೆಯಿಂದ ಇಂಗ್ಲೀಷ್ ಆಯ್ಕೆ ಮಾಡಿಕೊಂಡರೆ ?

13) ಒಂದು ವೇಳೆ ಇಂಗ್ಲೀಷ್ ಭಾಷೆಯ ಮಾದರಿಯಲ್ಲಿ ಹಿಂದಿ ಎಲ್ಲಾ ಜನರ ಸ್ವಯಂ ಆಯ್ಕೆಯಾಗುವುದಾದರೆ ಯಾರೂ ತಡೆಯುವುದು ಸಾಧ್ಯವಿಲ್ಲ ಅಲ್ಲವೇ ? ಹಾಗಿದ್ದಲ್ಲಿ ಒತ್ತಾಯಪೂರ್ವಕ ಏಕೆ ?

14) ಸಂವಿಧಾನಾತ್ಮಕವಾಗಿ ನಮ್ಮ ಸ್ವ ಇಚ್ಛೆಯಿಂದ ಯಾವುದೇ ಭಾಷೆಯನ್ನು ಕಲಿಯುವ, ಆ ಭಾಷೆಯ ಸಾಹಿತ್ಯ ಓದುವ, ಸಿನಿಮಾ ನೋಡುವ, ಅದನ್ನು ಅಭಿಮಾನಿಸುವ, ಜ್ಞಾನಾರ್ಜನೆ ಹೆಚ್ಚಿಸಿಕೊಳ್ಳುವ ಸ್ವಾತಂತ್ರ್ಯ ಎಲ್ಲರಿಗೂ ಇರುವಾಗ ಈ " ಹೇರಿಕೆ " ಯ ಹುನ್ನಾರವೇನು ?

15) ತಾಯಿಭಾಷೆಯೇ ನಮ್ಮೆಲ್ಲಾ ಕಲಿಕೆಯ, ನಮ್ಮೊಳಗಿನ ಅಂತಃಶಕ್ತಿಯ ನಿಜವಾದ ಕಾರಣ ಎಂದು ವಿಶ್ವ ಇತಿಹಾಸದ ಎಲ್ಲಾ ವಿಷಯ ತಜ್ಞರು ಹೇಳಿರುವಾಗ ಈ ಹೇರಿಕೆ ಸರಿಯೇ ? ತಮ್ಮದಲ್ಲದ ಭಾಷೆಯನ್ನು ಮಕ್ಕಳ ಮೇಲೆ ಒತ್ತಾಯಪೂರ್ವಕವಾಗಿ ಹೇರಿದಾಗ ಮಾತೃಭಾಷೆ ಹಿಂದಿಯ ಮಕ್ಕಳ ನಡುವೆ ನಮ್ಮ ಮಕ್ಕಳು ನಲುಗುವುದಿಲ್ಲವೇ ?

16) ದಯವಿಟ್ಟು ಗಮನಿಸಿ. ಈ ಹೇರಿಕೆ ಮೇಲ್ನೋಟಕ್ಕೆ ಮಾಡುವ ಅಪಾಯಕ್ಕಿಂತಲೂ ದೀರ್ಘಕಾಲದಲ್ಲಿ ಅದು ನಮ್ಮ ಇಡೀ ಸಾಂಸ್ಕೃತಿಕ ವ್ಯಕ್ತಿತ್ವವನ್ನೇ ಆಪೋಶನ ತೆಗೆದುಕೊಂಡು ನಮ್ಮನ್ನು ಭಾಷಾ ಅಸ್ಪೃಶ್ಯರನ್ನಾಗಿ ಮಾಡುವ ಎಲ್ಲಾ ಸಾಧ್ಯತೆಗಳೂ ಕಾಣುವುದಿಲ್ಲವೇ ? ಮಾತೃಭಾಷೆಯ ಜೊತೆ ಇದೊಂದು ಪೂರಕ ಭಾಷೆ ಎಂದು ಹೇಳಲಾಗುತ್ತದೆ. ಆದರೆ ಒಳಗಿನ ಲೆಕ್ಕಾಚಾರವೇ ಬೇರೆ ಎಂಬ ಅನುಮಾನ ಕಾಡುವುದಿಲ್ಲವೇ ?

ಹೀಗೆ ಸಾಗುವ ಮತ್ತು ಮನದಲ್ಲಿ ಮೂಡುವ ಅನೇಕ ಪ್ರಶ್ನಾವಳಿಗಳಿಗೆ ಸೂಕ್ಷ್ಮವಾಗಿ ಉತ್ತರ ಹುಡುಕಿಕೊಂಡಾಗ ನಮಲ್ಲಿ ಮೂಡುವ ಸಮಷ್ಟಿ ಪ್ರಜ್ಞೆಯ ಜ್ಞಾನದಿಂದ ಹಿಂದಿ ಭಾಷೆಯ ಹೇರಿಕೆಯ ಬಗ್ಗೆ ಒಂದು ಅಭಿಪ್ರಾಯ ರೂಪಿಸಿಕೊಳ್ಳಬಹುದು.ಒಟ್ಟಿನಲ್ಲಿ,

ಹಿಂದಿ ಅಥವಾ ಇನ್ಯಾವುದೇ ಭಾಷೆಯ ಬಗ್ಗೆ ಯಾರಿಗೂ ದ್ವೇಷ ಅಸೂಯೆ ಇಲ್ಲ. ಆ ಭಾಷೆಯ ಬಗ್ಗೆ ಎಲ್ಲರಿಗೂ ಗೌರವವಿದೆ. ಆದರೆ ನಮ್ಮ ಮೇಲೆ ತಾಯಿಭಾಷೆ ಹೊರತುಪಡಿಸಿ ಬೇರೆ ಯಾವುದೇ ಭಾಷೆಯನ್ನು ಹೇರಿಕೆ ಮಾಡುವುದರ ವಿರುದ್ಧ ಮಾತ್ರ ಪ್ರತಿಭಟನೆ ಮಾಡಬೇಕಿದೆ.

ಭಾರತದ ಒಕ್ಕೂಟ ವ್ಯವಸ್ಥೆಯ ನಿಜವಾದ ಶಕ್ತಿ ಅಡಗಿರುವುದು ಇಲ್ಲಿನ ವೈವಿಧ್ಯತೆಯಿಂದಲೇ ಎಂಬುದನ್ನು ಮರೆಯದಿರೋಣ. ರಾಜಕೀಯ ಹೊರತುಪಡಿಸಿ ಇದನ್ನು ಒಕ್ಕೊರಲಿನಿಂದ ಖಂಡಿಸಬೇಕಿದೆ.

ಮಕ್ಕಳೇ, ಇನ್ನೊಂದು ಕಿವಿಮಾತು ಏನೆಂದರೆ, ಕಾಲ ಮುಂದುವರಿದಂತೆ, ನನ್ನ ಮಕ್ಕಳ ಸಂಖ್ಯೆ ಹೆಚ್ಚಾದಂತೆ, ಜ್ಞಾನ ಮತ್ತು ಹೊಟ್ಟೆಪಾಡಿನ ಅವಶ್ಯಕತೆ ಉಂಟಾದಂತೆ, ನೀವು ಕೇವಲ ನನ್ನನ್ನು ಮಾತ್ರ ಅವಲಂಬಿಸಿದರೆ ಕಷ್ಟವಾಗುತ್ತದೆ. ನಾನು ಅದನ್ನು ಅಪೇಕ್ಷಿಸಿದರೆ ಸ್ವಾರ್ಥಿಯಾಗಬಹುದು ಎನಿಸುತ್ತದೆ. ಆ ಕಾರಣಕ್ಕಾಗಿ ನನ್ನ ನಂತರ ಇಂಗ್ಲೀಷಮ್ಮನನ್ನೇ ಹೆಚ್ಚಾಗಿ ಪ್ರೀತಿಸಿ. ಆಕೆ ವಿಶ್ವದಲ್ಲೇ ಹೆಚ್ಚು ಪ್ರಖ್ಯಾತಳು, ಜ್ಞಾನದಲ್ಲಿ ಶ್ರೀಮಂತಳೂ ಮತ್ತು ವಿಶಾಲ ಮನೋಭಾವದವಳೂ ಆಗಿದ್ದಾಳೆ.

ಮಕ್ಕಳೇ, ಇತ್ತೀಚಿಗೆ ಕೆಲವರು ಧರ್ಮದ – ರಾಜಕೀಯದ ನೆಪದಲ್ಲಿ ಇಂಗ್ಲೀಷಮ್ಮನಿಗಿಂತ ಹಿಂದಿಯಮ್ಮನೇ ನಮಗೆ ಮುಖ್ಯ ಎನ್ನುತ್ತಿದ್ದಾರೆ. ವಾಸ್ತವವಾಗಿ ಅದು ಅಷ್ಟು ಸರಿಯಲ್ಲ ಕಂದ. ಈ ಹಿಂದಿಯಮ್ಮ, ತೆಲುಗಮ್ಮ, ತಮಿಳಮ್ಮ, ಮಲಯಾಳಂ ಅಮ್ಮ, ಉರ್ದು ಅಮ್ಮ ಇವರೆಲ್ಲಾ ನಮ್ಮ ದಾಯಾದಿಗಳು. ಮೇಲು ನೋಟಕ್ಕೆ ನಾವೆಲ್ಲಾ ರಕ್ತ ಸಂಬಂಧಿಗಳೇ. ಆದರೆ ಮತ್ಸರ ಮಾತ್ರ ಒಳಗೊಳಗೇ ಕುದಿಯುತ್ತಿದೆ. ಒಬ್ಬರ ಏಳಿಗೆ ಇನ್ನೊಬ್ಬರು ಸಹಿಸುತ್ತಿಲ್ಲ. ಅಲ್ಲದೆ ಹೆಚ್ಚು ಕಡಿಮೆ ಅವರ ವ್ಯಾಪ್ತಿಯೂ ನಮ್ಮ ಅಷ್ಟೇ ಇದೆ. ಆದ್ದರಿಂದ ಪುಟ್ಟಗಳ ನನ್ನ ನಂತರ ನಿಮಗೆ ಇಂಗ್ಲೀಷಮ್ಮನೇ ಇರುವುದರಲ್ಲಿ ಉತ್ತಮ ಆಯ್ಕೆ ಎಂಬುದು ತಾಯಿಯಾಗಿ ನನ್ನ ಸಲಹೆ.

ಕೊನೆಯದಾಗಿ ಮಕ್ಕಳೇ, ಇತ್ತೀಚಿಗೆ ನಿಮಗೆ ನನ್ನ ಮೇಲೆ ಅದರಲ್ಲೂ ಹೆಚ್ಚಾಗಿ ಕೆಲವು ಹೆಣ್ಣು ಮಕ್ಕಳಿಗೆ ನನ್ನ ಬಗ್ಗೆ ಅಸಡ್ಡೆ ಬಂದಿದೆ. ಬೇರೆ ಥಳುಕು ಬಳುಕಿನ ಅಮ್ಮಂದಿರನ್ನು ನೋಡಿದ ಮೇಲೆ ಆಕೆಯ ಸನಿಹವನ್ನೇ ಹೆಚ್ಚಾಗಿ ಬಯಸುತ್ತಿದ್ದಾರೆ. ಏಕೆ ಈ ಕನ್ನಡಮ್ಮ ಬೇಸರವಾದಳೆ ? ಬಡವಳು, ಅಸಹಾಯಕಳು, ದಡ್ಡಿ ಎಂಬ ಅಸಡ್ಡೆಯೇ ? ಕೀಳರಿಮೆಯೇ ?

ಬೇಡ ಮಕ್ಕಳೇ , ಏನೇ ಆದರೂ ಸ್ವಂತ ತಾಯಿಯನ್ನು ತಿರಸ್ಕರಿಸಿದ ಯಾರೂ ನೆಮ್ಮದಿಯಾಗಿ ಜೀವಿಸುವ ಸಾಧ್ಯತೆ ಇಲ್ಲ.

ಆದ್ದರಿಂದ, ನನಗಿಂತ ನಿಮ್ಮ ಒಳ್ಳೆಯದಕ್ಕೇ ಹೇಳುತ್ತಿದ್ದೇನೆ. ಧೈರ್ಯವಾಗಿ ಹೇಳಿ,

ಹೆಮ್ಮೆಯಿಂದ ಹೇಳಿ,

ಛಲದಿಂದ ಹೇಳಿ,

ಸ್ವಾಭಿಮಾನದಿಂದ ಹೇಳಿ,

ಸಂತೋಷದಿಂದ ಹೇಳಿ,

ಆತ್ಮ ವಿಶ್ವಾಸದಿಂದ ಹೇಳಿ.

ಕನ್ನಡಮ್ಮನೇ ನಮ್ಮಮ್ಮ. ಉಳಿದವರು ಚಿಕ್ಕಮ್ಮ ಮಾತ್ರ.

ಕೊನೆಯ ಉಸಿರಿರುವವರೆಗೂ.

ಇನ್ನು ಮುಂದೆ ಪ್ರೀತಿ ಪ್ರೇಮ ಪ್ರಣಯ ನಗು ಅಳು ಕೋಪ ದ್ವೇಷ ಕರುಣೆ ರೌದ್ರ ಭೀಬತ್ಸ ಭಯಾನಕ ಮುಂತಾದ ಎಲ್ಲಾ ಭಾವನೆಗಳೂ ಕನ್ನಡವೇ . ಮನೆ ಶಾಲೆ ಕಾಲೇಜು ಸಿನಿಮಾ ಚಿತ್ರಮಂದಿರ ಆಸ್ಪತ್ರೆ ಮಾಲು ಬಸ್ಸು ರೈಲು ವಿಮಾನ ಮೆಟ್ರೋ ಪಾರ್ಕು ಹೋಟೆಲ್ಲು ಇತ್ಯಾದಿ ಎಲ್ಲಾ ಕಡೆ ಕನ್ನಡ ಕನ್ನಡ ಕನ್ನಡ ಎಂದು ಹೃದಯದಾಳದಿಂದ ಪ್ರತಿಜ್ಞೆ ಮಾಡಿ.

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ.

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ,

ಮನಸ್ಸುಗಳ ಅಂತರಂಗದ ಚಳವಳಿ,

ವಿವೇಕಾನಂದ. ಎಚ್. ಕೆ.

9663750451....

9844013068........

## ಜನಗಣತಿ–2027 ಏ.15 ರವರೆಗೆ

## ಸ್ವಯಂ ಗಣನೆಗೆ ಡಿ.ಸಿ. ಕರೆ

ತುಮಕೂರು: ಭಾರತ ಸರ್ಕಾರದ ಜನಗಣತಿ–2027 ಕಾರ್ಯದ ಅಂಗವಾಗಿ ತುಮಕೂರು ಜಿಲ್ಲೆಯಲ್ಲಿ ಏಪ್ರಿಲ್ 15ರವರೆಗೆ ಸ್ವಯಂ ಗಣನೆ(Self E numer ation) ಪ್ರಕ್ರಿಯೆಯನ್ನು ನಡೆಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ. ಈ ಅವಧಿಯಲ್ಲಿ ಜಿಲ್ಲೆಯ ಎಲ್ಲಾ ಕುಟುಂಬಗಳು ತಮಗೆ ಸಂಬಂಧಿಸಿದ ಜನಗಣತಿ ಮಾಹಿತಿಯನ್ನು ಸ್ವಯಂವಾಗಿ ಆನ್‌ಲೈನ್ ಮೂಲಕ ದಾಖಲಿಸಲು ಅವಕಾಶ ಕಲ್ಪಿಸಲಾಗಿದೆ. ಸ್ವಯಂ ಗಣನೆ ಪ್ರಕ್ರಿಯೆಯಲ್ಲಿ ಭಾಗವಹಿಸುವುದರಿಂದ ಜನಗಣತಿ ಕಾರ್ಯವು ವೇಗವಾಗಿ, ಸುಲಭವಾಗಿ ಮತ್ತು ಶುದ್ಧತೆಯಿಂದ ಪೂರ್ಣಗೊಳ್ಳಲು ಸಹಕಾರಿ ಆಗುತ್ತದೆ.

**ಸ್ವಯಂ ಗಣನೆ ಮಾಡುವ ವಿಧಾನ:**

ಭಾರತ ಸರ್ಕಾರದ ಅಧಿಕೃತ ಪೋರ್ಟಲ್/ ಮೊಬೈಲ್ ಆಪ್ ಮೂಲಕ ಆನ್‌ಲೈನ್‌ನಲ್ಲಿ ಪ್ರಶ್ನಾವಳಿಯನ್ನು ಭರ್ತಿ ಮಾಡಬಹುದು. ಮಾಹಿತಿಯನ್ನು ಪೂರ್ಣಗೊಳಿಸಿದ ನಂತರ, ಒಂದು ಕೋಡ್ ರಚನೆಯಾಗುತ್ತದೆ. ನಂತರ ಗಣತಿ ಸಿಬ್ಬಂದಿ ಮನೆಗೆ ಭೇಟಿ ನೀಡುವ ಸಂದರ್ಭದಲ್ಲಿ, ಈ ಕೋಡ್ ಅನ್ನು ಸ್ಕ್ಯಾನ್ ಮಾಡಿ ಮಾಹಿತಿಯನ್ನು ಪರಿಶೀಲಿಸಲಾಗುತ್ತದೆ. ಸ್ವಯಂ ಗಣನೆ ಮಾಡದ ಕುಟುಂಬಗಳಿಗೆ ನಂತರ ಜನಗಣತಿ ಸಿಬ್ಬಂದಿ ಮನೆ– ಮನೆಗೆ ಭೇಟಿ ನೀಡಿ ಮಾಹಿತಿಯನ್ನು ಸಂಗ್ರಹಿಸುವರು.ಜಿಲ್ಲೆಯ ಎಲ್ಲಾ ನಾಗರಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು, ಸಮಯಕ್ಕೆ ಸರಿಯಾಗಿ ಸ್ವಯಂ ಗಣನೆ ಪ್ರಕ್ರಿಯೆಯಲ್ಲಿ ಭಾಗವಹಿಸಿ ಸರ್ಕಾರದ ಮಹತ್ವದ ಕಾರ್ಯಕ್ಕೆ ಸಹಕರಿಸುವಂತೆ ಅವರು ಮನವಿ ಮಾಡಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಗ್ರಾಮಾಂತರ ವ್ಯಾಪ್ತಿಯ ಸಮೀಪದ ತಾಲ್ಲೂಕು ಕಚೇರಿ ಮತ್ತು ನಗರ ಪ್ರದೇಶಗಳ ವ್ಯಾಪ್ತಿಯ ನಗರ ಸ್ಥಳೀಯ ಸಂಸ್ಥೆಗಳ ಜನಗಣತಿ ಕಚೇರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ದೇಹದಲ್ಲಿ ವಿಟಮಿನ್ ಎ ಕೊರತೆಯಾಗಿದೆ ಎಂಬುದನ್ನು ತಿಳಿದುಕೊಳ್ಳುವುದು ಹೇಗೆ? ನಿರ್ಲಕ್ಷಿಸಿದರೆ ಏನಾಗುತ್ತೆ?

ವಿಟಮಿನ್ ಎ ದೇಹಕ್ಕೆ ಅತ್ಯಾವಶ್ಯಕವಾದ ಪೋಷಕಾಂಶವಾಗಿದೆ. ಇದರ ಕೊರತೆಯಿಂದ ಹಲವು ಆರೋಗ್ಯ ಸಮಸ್ಯೆಗಳು ಉಂಟಾಗುವ ಸಾಧ್ಯತೆ ಇದೆ. ಆದ್ದರಿಂದ ಇದರ ಲಕ್ಷಣಗಳನ್ನು ಸಮಯಕ್ಕೆ ಸರಿಯಾಗಿ ಗುರುತಿಸುವುದು ಬಹಳ ಮುಖ್ಯ. ಹಾಗಾಗಿ ಪ್ರತಿಯೊಬ್ಬರೂ ಕೂಡ ವಿಟಮಿನ್ ಎ ಕೊರತೆಯ ಲಕ್ಷಣಗಳ ಬಗ್ಗೆ ತಿಳಿದುಕೊಂಡು ಅದನ್ನು ನಿವಾರಿಸಿಕೊಳ್ಳಬೇಕು. ಇಲ್ಲವಾದಲ್ಲಿ ಇದು ನಾನಾ ರೀತಿಯ ಆರೋಗ್ಯ ಸಮಸ್ಯೆಗೆ ಕಾರಣವಾಗುತ್ತದೆ.

ವಿಟಮಿನ್ ಎ ಬಗ್ಗೆ ಸಾಮಾನ್ಯವಾಗಿ ಎಲ್ಲರಿಗೂ ತಿಳಿದಿರಬಹುದು. ದೇಹವನ್ನು ಆರೋಗ್ಯಕರವಾಗಿಡಲು ಇದು ಪ್ರಮುಖ ಪಾತ್ರ ವಹಿಸುತ್ತದೆ. ಅದಕ್ಕೂ ಮಿಗಿಲಾಗಿ ಕಣ್ಣಿನ ದೃಷ್ಟಿಯನ್ನು ಉತ್ತಮವಾಗಿರಿಸಲು, ರೋಗನಿರೋಧಕ ಶಕ್ತಿಯನ್ನು ಬಲಪಡಿಸಲು ಮತ್ತು ಚರ್ಮವನ್ನು ಆರೋಗ್ಯಕರವಾಗಿಡಲು ಸಹಾಯ ಮಾಡುತ್ತದೆ. ವಿಟಮಿನ್ ಎ ಕೊರತೆಯಿಂದ ಕಣ್ಣುಗಳಿಗೆ ಸಂಬಂಧಿಸಿದ ಸಮಸ್ಯೆಗಳು, ಪದೇಪದೇ ಸೋಂಕುಗಳು ಮತ್ತು ಚರ್ಮ ಒಣಗುವಂತಹ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ಅದರಲ್ಲಿಯೂ ಚಿಕ್ಕ ಮಕ್ಕಳು, ಗರ್ಭಿಣಿಯರು ಮತ್ತು ದುರ್ಬಲ ರೋಗನಿರೋಧಕ ಶಕ್ತಿಯುಳ್ಳವರಲ್ಲಿ ವಿಟಮಿನ್ ಎ ಕೊರತೆಯ ಅಪಾಯ ಹೆಚ್ಚಾಗಿರುತ್ತದೆ. ಸಮತೋಲನಯುತ ಆಹಾರದ ಕೊರತೆ, ಪೋಷಕಾಂಶಗಳ ಅಭಾವ ಮತ್ತು ಅಸ್ವಸ್ಥ ಜೀವನಶೈಲಿ ಇದರ ಪ್ರಮುಖ ಕಾರಣಗಳಾಗಿವೆ. ಹಾಗಾಗಿ ಪ್ರತಿಯೊಬ್ಬರೂ ಕೂಡ ವಿಟಮಿನ್ ಎ ಕೊರತೆಯ ಲಕ್ಷಣಗಳ ಬಗ್ಗೆ ತಿಳಿದುಕೊಂಡು




ಅದನ್ನು ನಿವಾರಿಸಿಕೊಳ್ಳಬೇಕು. ಇಲ್ಲವಾದಲ್ಲಿ ಇದು ನಾನಾ ರೀತಿಯ ಆರೋಗ್ಯ ಸಮಸ್ಯೆಗೆ ಕಾರಣವಾಗುತ್ತದೆ.

**ವಿಟಮಿನ್ ಎ ಕೊರತೆಯ ಲಕ್ಷಣಗಳು:**

ರಾತ್ರಿ ವೇಳೆ ಸ್ಪಷ್ಟವಾಗಿ ಕಾಣಿಸದಿರುವುದು ಅಥವಾ ದೃಷ್ಟಿ ದುರ್ಬಲವಾಗುವುದುಕಣ್ಣುಗಳು ಒಣಗುವುದು ಅಥವಾ ಉರಿಯೂತ ಚರ್ಮ ಒಣಗುವುದು

ತುಟಿಗಳು ಬಿರುಕು ಬೀಡುವುದು ಕೂದಲು ದುರ್ಬಲವಾಗುವುದು

ಪದೇಪದೇ ಜ್ವರ, ಶೀತ ಅಥವಾ ಸೋಂಕುಗಳು ಕಂಡುಬರುವುದು

ಗಾಯಗಳು ಗುಣವಾಗಲು ಹೆಚ್ಚು ಸಮಯ ತೆಗೆದುಕೊಳ್ಳುವುದು

**ವಿಟಮಿನ್ ಎ ಕೊರತೆಯನ್ನು ತಡೆಗಟ್ಟಲು ಸಲಹೆಗಳು?**

ಸಾಮಾನ್ಯವಾಗಿ ವಿಟಮಿನ್ ಎ ಕೊರತೆಯನ್ನು ನಿವಾರಿಸಲು ಆಹಾರದಲ್ಲಿ ಸ್ವಲ್ಪ ಬದಲಾವಣೆ ಮಾಡಿಕೊಳ್ಳುವುದು ಅಗತ್ಯ. ಕ್ಯಾರೆಟ್, ಪಾಲಕ್ ಮತ್ತು ಹಸಿರು ತರಕಾರಿಗಳು ವಿಟಮಿನ್ ಎ ಯ ಉತ್ತಮ ಮೂಲಗಳಾಗಿವೆ. ಇದರ ಜೊತೆಗೆ ಹಾಲು, ಮೊಟ್ಟೆ ಮತ್ತು ಮೀನು ಕೂಡ ಉಪಯುಕ್ತವಾಗಿವೆ. ಪ್ರತಿದಿನ ಸಮತೋಲನಯುತ ಆಹಾರವನ್ನು ಸೇವಿಸುವುದು ಮತ್ತು ಪೋಷಕಾಂಶಗಳಿಂದ ಸಮೃದ್ಧವಾದ ಆಹಾರಗಳನ್ನು ಸೇರಿಸಿಕೊಳ್ಳುವುದರಿಂದ ಈ ಕೊರತೆಯನ್ನು ತಡೆಯಬಹುದು. ಅಗತ್ಯವಿದ್ದರೆ ವೈದ್ಯರ ಸಲಹೆಯೊಂದಿಗೆ ಪೂರಕಗಳನ್ನು (ಸಪ್ಲಿಮೆಂಟ್ಸ್) ಕೂಡ ಬಳಸಬಹುದು.

ಸರಿಯಾದ ಆಹಾರ ಮಾತ್ರವಲ್ಲ, ಆರೋಗ್ಯಕರ ಜೀವನಶೈಲಿಯೂ ಅತ್ಯಂತ ಮುಖ್ಯವಾಗುತ್ತದೆ. ಸಮಯಕ್ಕೆ ಸರಿಯಾಗಿ ಊಟ ಮಾಡುವುದು, ಜಂಕ್ ಫುಡ್‌ಗಳಿಂದ ದೂರವಿರುವುದು ಮತ್ತು ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದು ಅಗತ್ಯ. ವಿಶೇಷವಾಗಿ ಮಕ್ಕಳು ಮತ್ತು ಗರ್ಭಿಣಿಯರು ತಮ್ಮ ಆಹಾರ ಪದ್ಧತಿಯ ಬಗ್ಗೆ ಹೆಚ್ಚಿನ ಗಮನಕೊಡಬೇಕು. ಸರಿಯಾದ ಅಭ್ಯಾಸಗಳನ್ನು ಅಳವಡಿಸಿಕೊಂಡರೆ ದೀರ್ಘಕಾಲ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು.

# 14 ವರ್ಷದ ಬಾಲಕನಿಗೆ “ಮೂಗಿನ ಉಸಿರಾಟ ಆಪರೇಷನ್” ಶಸ್ತ್ರ ಚಿಕಿತ್ಸೆ ಯಶಸ್ವಿ

ತುಮಕೂರು: ತುಮಕೂರಿನ ಎಸ್.ಎಸ್.ಪುರಂ 3ನೇ ಕ್ರಾಸ್‌ನ ಗಾಣದಾಳ್ ಕಿವಿ, ಮೂಗು, ಗಂಟಲು ಮತ್ತು ದಂತ ಆಸ್ಪತ್ರೆಯಲ್ಲಿ ಸುಮಾರು 6 ವರ್ಷಗಳಿಂದ ಬಾಲಕನಿಗೆ ಮೂಗಿನ ಉಸಿರಾಟದ ತೊಂದರೆಯಿಂದ ಬಳಲುತ್ತಿದ್ದರು. ದಿನರಾತ್ರಿ ಅವನ ಉಸಿರಾಟ ಶಬ್ದಗಳೊಂದಿಗೆ ತುಂಬಾ ಸಮಸ್ಯೆಯನ್ನು ಹೊಂದಿತ್ತು. ಆದ್ದರಿಂದ ಆಪರೇಷನ್ ಮೂಲಕ ಶಸ್ತ್ರಚಿಕಿತ್ಸೆ ನಡೆಸಿದ್ದಾರೆ.

ಮಧುಗಿರಿಯ 14 ವರ್ಷದ ಬಾಲಕ ಕಾರ್ತಿಕ್ 6 ವರ್ಷಗಳಿಂದ ಉಸಿರಾಟದ ತೊಂದರೆಯಿಂದ ಬಳಲುತ್ತಿದ್ದನು. ದಿನರಾತ್ರಿ ಅವನ ಉಸಿರಾಟ ಶಬ್ದಗಳೊಂದಿಗೆ ನಡೆಯುತ್ತಿತ್ತು. ಈ ಸಮಸ್ಯೆಯಿಂದಾಗಿ ಅವನು ಅನೇಕ ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳಿಗೆ ತೆರಳಿ ಚಿಕಿತ್ಸೆ ಪಡೆದರೂ ಯಾವುದೇ ಫಲಿತಾಂಶ ದೊರೆಯಲಿಲ್ಲ. ಒಂದು ಆಸ್ಪತ್ರೆಗಳಿಂದ ಮತ್ತೊಂದು ಆಸ್ಪತ್ರೆಗೆ ಕಳುಹಿಸಲಾಗಿತ್ತು. ಕೊನೆಗೆ ಅ ಹುಡುಗನು ತುಂಬಾ ನಿರಾಶದಾಕನಾದನು. ನಂತರ ಅನ್‌ಲೈನ್‌ನ ಗೂಗಲ್‌ನಲ್ಲಿ ತುಮಕೂರಿನ ಅತ್ಯುತ್ತಮ ಕಿವಿ–ಮೂಗು ಗಂಟಲು ಆಸ್ಪತ್ರೆಯನ್ನು ಹುಡುಕಿದಾಗ ಗಾಣದಾಳ್ ಇ.ಎನ್.ಟಿ. ಮತ್ತು ದಂತ ಆಸ್ಪತ್ರೆ ಬಗ್ಗೆ ಮಾಹಿತಿ ದೊರಕಿತ್ತು. ಆ ನಂತರ ವೈದ್ಯರಾದ ಡಾ.ಮುನೀಶ್ವರ ಹಾಗೂ ವೈದ್ಯರ ತಂಡದವರು ಬಾಲಕನ ಸಮಸ್ಯೆಯನ್ನು ಸಂಪೂರ್ಣವಾಗಿ ತಿಳಿದುಕೊಂಡು ವಿವಿಧ ಪರೀಕ್ಷೆಗಳನ್ನು ನಡೆಸಿದರು.

ಬಾಲಕನಿಗೆ ವೈದ್ಯರು ಪರೀಕ್ಷಿಸಿದ ನಂತರ ಅವರಿಗೆ ಬೇಕಾದ ಪರೀಕ್ಷೆಗಳಾದ ಮೂಗಿನ ಒಳಭಾಗ ಮತ್ತು ಗಂಟಲಿನ ಪರಿಶೀಲನೆ, ರಕ್ತಪರೀಕ್ಷೆ, ಉಸಿರಾಟ ಸಾಮರ್ಥ್ಯ ಪರೀಕ್ಷೆ, ಎಕ್ಸ್ ರೇ, ಸಿ.ಟಿ.ಸ್ಕ್ಯಾನಿಂಗ್ ಇನ್ನೂ ಮುಂತಾದ ಪರೀಕ್ಷೆಗಳ ಮೂಲಕ ಅವನಿಗೆ ಅಡಿನಾಯ್ಡ್ಸ್ (ಮೂಗಿನ ಹಿಂದಿನ ಮಾಂಸಗೆಡ್ಡೆ) ಟಾನ್ಸಿಲ್ (ಗಂಟಲಿನ ಮಾಂಸಗೆಡ್ಡೆ), ಸೈನಸೈಟಿಸ್ (ಮುಖದ ಒಳಗುಹೆಯ ಸೋಂಕು) ಮೂಗಿನ ಮಧ್ಯದ ಎಲುಬಿನ ವಕ್ರತೆ ಹಾಗೂ ಅಲರ್ಜಿ ಇರುವುದಾಗಿ ಪತ್ತೆಯಾಗಿತ್ತು.

ತಕ್ಷಣವೇ ಶಸ್ತ್ರಚಿಕಿತ್ಸೆ ಅಗತ್ಯವಿದೆ ಎಂದು ವೈದ್ಯರು ತಿಳಿಸಿದರು, ಸುಮಾರು 6 ವರ್ಷಗಳ ಕಾಲ ಸಮಸ್ಯೆಗಳಿಂದ ಬಳಲುತ್ತಿದ್ದರು, ಪೋಷಕರು ಕೂಡಲೇ ಒಪ್ಪಿಗೆ ನೀಡಿದರು. ನಂತರ ಅತ್ಯಾಧುನಿಕ ಸಾಧನಗಳ ಸಹಾಯದಿಂದ ರಕ್ತಸ್ರಾವ ಕಡಿಮೆ ಮತ್ತು ನೋವು ಕಡಿಮೆ ಇರುವ ವಿಧಾನದಲ್ಲಿ ಟಾನ್ಸಿಲ್ಸ್ ಮತ್ತು ಅಡಿನಾಯ್ಡ್ ತೆಗೆದುಹಾಕುವ ಶಸ್ತ್ರಚಿಕಿತ್ಸೆ ಯಶಸ್ವಿಯಾಗಿ ನೆರವೇರಿಸಲಾಗಿತ್ತು. ಜೊತೆಗೆ ಎಡಭಾಗದ ಮ್ಯಾಕ್ಸಿಲರಿ ಸೈನಸ್‌ನಿಂದ ಕೀವು ತೆಗೆಯಲಾಗಿದೆ. ಶಸ್ತ್ರಚಿಕಿತ್ಸೆಯ ನಂತರ ತಕ್ಷಣವೇ ಬಾಲಕನ ಉಸಿರಾಟದ ಶಬ್ದ ನಿಂತು, ಉಸಿರಾಟದ ತೊಂದರೆ ಸಂಪೂರ್ಣವಾಗಿ ನಿವಾರಣೆಯಾಗಿತ್ತು. ಚಿಕಿತ್ಸೆಯಲ್ಲಿ ಆರೈಕೆ ನೀಡಿ ಗುಣಮುಖರನ್ನಾಗಿ ಮಾಡಲಾಗಿದೆ, ಸದರಿ ಯಶಸ್ವಿ ಆಪರೇಷನ್ ಮೊದಲು ರೋಗಿಯ ಕುಟುಂಬಸ್ಥರಿಗೆ ಶಸ್ತ್ರಚಿಕಿತ್ಸೆಗೆ ಧೈರ್ಯ ತುಂಬಿದ ಗಾಣದಾಳ್ ಕಿವಿ, ಮೂಗು, ಗಂಟಲು ಮತ್ತು ದಂತ ಆಸ್ಪತ್ರೆಯ ವೈದ್ಯರಾದ ಡಾ.ಮುನೀಶ್ವರ ಜಿ.ಬಿ.ರವರ ತಂಡಕ್ಕೆ ಹೃದಯ ಪೂರ್ವಕ ಅಭಿನಂದನೆ ಸಲ್ಲಿಸಿದರು. ಇದ್ದರಿಂದ ಬಾಲಕ ಮತ್ತು ಪೋಷಕರು ತುಂಬಾ ಸಂತೋಷಗೊಂಡರು ವೈದ್ಯರನ್ನು ಅಭಿನಂದಿಸಿದರು.



ಈ ಆಪರೇಷನ್ ತುಂಬಾ ಸವಾಲಿನದ್ದಾಗಿದ್ದರೂ ವೈದ್ಯರ ನಿಪುಣ್ಯತೆಯಿಂದ ಯಶಸ್ವಿಯಾಗಿ ಪರಿಹರಿಸಲಾಗಿತ್ತು. ಮಕ್ಕಳಲ್ಲಿ ಟಾನ್ಸಿಲ್ಸ್ ಮತ್ತು ಅಡಿನಾಯ್ಡ್ ವೃದ್ಧಿಯಾಗುವುದರಿಂದ ಉಸಿರಾಟದ ತೊಂದರೆಯುಂಟಾಗುವುದು. ಸಾಮಾನ್ಯ ಔಷಧಿಯಿಂದ ನಿಯಂತ್ರಣವಾಗದಿದ್ದರೆ ಶಸ್ತ್ರಚಿಕಿತ್ಸೆ ಅವಶ್ಯಕ ಈ ಎಲ್ಲಾ ಶಸ್ತ್ರಚಿಕಿತ್ಸೆಗಳು ದೇಹದ ಒಳಭಾಗದಿಂದಲೇ ನಡೆಯುವುದರಿಂದ ಯಾವುದೇ ಹೊರಗಿನ ಗುರುತು ಇರುವುದಿಲ್ಲ. ಸಾಮಾನ್ಯವಾಗಿ ಎರಡು ವಾರಗಳಲ್ಲಿ ಸಂಪೂರ್ಣ ಚೇತರಿಕೆ ಸಾಧ್ಯ. ಈ ಶಸ್ತ್ರಚಿಕಿತ್ಸೆಯಲ್ಲಿ ಯಾವುದೇ ಅಡ್ಡಪರಿಣಾಮಗಳು ಇರುವುದಿಲ್ಲ.

ಉಸಿರಾಟದ ತೊಂದರೆ ಕಂಡು ಬಂದಾಗ ತಕ್ಷಣವೇ ಕಿವಿ, ಮೂಗು, ಗಂಟಲು ತಜ್ಞರ ಭೇಟಿ ಮಾಡುವುದು ಮುಖ್ಯವಾಗಿದೆ. ಈ ಶಸ್ತ್ರಚಿಕಿತ್ಸೆಯಲ್ಲಿ ಗಾಣದಾಳ್ ಕಿವಿ, ಮೂಗು, ಗಂಟಲು ಮತ್ತು ದಂತ ಆಸ್ಪತ್ರೆಯ ವೈದ್ಯರಾದ ಡಾ.ಮುನೀಶ್ವರ ಜಿ.ಬಿ., ಡಾ.ಸೌಮ್ಯ, ಡಾ.ಆರ್ಯ ಹಾಗೂ ಸಿಬ್ಬಂದಿ ವರ್ಗದವರಾದ ಸಿದ್ದೇಶ್, ದಕ್ಷಿಣಮೂರ್ತಿ, ಅಂಬಿಕಾ, ಭೂಮಿಕಾ, ವನಜ, ರುದ್ರೇಶ್, ಮಧು, ಸುಮತಿ ಮುಂತಾದವರು ಭಾಗವಹಿಸಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಯುದ್ಧ ನಿಲ್ಲಿಸುವಂತೆ ಆಗ್ರಹಿಸಿ ನಾನಾ ಸಂಘಟನೆಗಳ ಸಹಯೋಗದಲ್ಲಿ ವಾಟಾಳ್ ನಾಗರಾಜ್ ಪ್ರತಿಭಟನೆ

ರಾಮನಗರ: ಯುದ್ಧೋನ್ಮಾದಲ್ಲಿರುವ ಅಮೆರಿಕಾ, ಇಸ್ರೇಲ್ ಮತ್ತು ಇರಾನ್ ರಾಷ್ಟ್ರಗಳು ಕೂಡಲೇ ಯುದ್ಧವನ್ನು ನಿಲ್ಲಿಸಿ ಶಾಂತಿಯಿಂದ ಮಾತುಕತೆಗಳ ಮೂಲಕ ಸಮಸ್ಯೆಯನ್ನು ಬಗೆಹರಿಸಿಕೊಳ್ಳಬೇಕು ಎಂದು ಕನ್ನಡ ಚಳುವಳಿ ಹೋರಾಟಗಾರ ವಾಟಾಳ್ ನಾಗರಾಜ್ ತಿಳಿಸಿದರು.

ನಗರದ ಐಜೂರು ವೃತ್ತದಲ್ಲಿ ಕರುನಾಡ ಸೇನೆ ಹಾಗೂ ಕನ್ನಡ ವಾಟಾಳ್ ಪಕ್ಷ ಸಂಯುಕ್ತವಾಗಿ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಮಧ್ಯಪ್ರಾಚ್ಯದಲ್ಲಿ ಕಳೆದ 31 ದಿನಗಳಿಂದ ನಡೆಯುತ್ತಿರುವ ಯುದ್ಧದಿಂದಾಗಿ ಇಡೀ ವಿಶ್ವಕ್ಕೆ ಅಪಾಯವಿದೆ. ಆದ್ದರಿಂದ ಕೂಡಲೇ ಯುದ್ಧವನ್ನು ನಿಲ್ಲಿಸಬೇಕೆಂದು ಒತ್ತಾಯಿಸಿ ಖಾಲಿ ಸಿಲಿಂಡರ್ ಮೇಲೆ ಕುಳಿತು, ಈಡುಗಾಯಿ ಒಡೆದು ಪ್ರತಿಭಟಿಸಿದರು.

ಹಿಂದೆ ಅಮೆರಿಕಾ ವಿಯೆಟ್ನಾಂ, ನಾಗಸಾಕಿ, ಹಿರೋಷಿಮಾಗಳಿಗೆ ಪರಮಾಣು ಬಾಂಬ್ ಹಾಕಿದ್ದು ಇತಿಹಾಸ. ಇಂದಿಗೂ ಅಲ್ಲಿನ ಜನರು ಸಂಕಷ್ಟದಲ್ಲಿದ್ದಾರೆ. ಆದ್ದರಿಂದ ದೇಶದ ಪ್ರಧಾನಮಂತ್ರಿ ನರೇಂದ್ರ ಮೋದಿ, ವಿರೋಧಪಕ್ಷದ ನಾಯಕ ರಾಹುಲ್‌ಗಾಂಧಿ ಹಾಗೂ ಮುಖಂಡರೆಲ್ಲರೂ ಸೇರಿ ಯುದ್ಧೋನ್ಮಾದಲ್ಲಿರುವ ಅಮೆರಿಕಾ, ಇಸ್ರೇಲ್ ಮತ್ತು ಇರಾನ್



ರಾಷ್ಟ್ರಗಳು ಕೂಡಲೇ ಯುದ್ಧ ನಿಲ್ಲಿಸಿ ಶಾಂತಿಯಿಂದ ಮಾತುಕತೆಗಳ ಮೂಲಕ ಸಮಸ್ಯೆಯನ್ನು ಬಗೆಹರಿಸಿಕೊಳ್ಳುವಂತೆ ಮನವಿ ಮಾಡಬೇಕಾಗಿದೆ. ಇಡೀ ವಿಶ್ವದಲ್ಲಿ ಭಾರತ ದೇಶಕ್ಕೆ ಮಾತ್ರ ಇಂತಹ ಶಕ್ತಿ ಇದೆ ಎಂದರು.

ಅನಿಲ ಮತ್ತು ಇಂಧನ ಕೊರತೆಯಿಂದ ಈಗಾಗಲೇ ರಾಜ್ಯದಲ್ಲಿ ಅತ್ಯಂತ ಗಂಭೀರ ಪರಿಸ್ಥಿತಿ ಉಂಟಾಗಿದ್ದು, ಜನಜೀವನ ಅಲ್ಲೋಲ ಕಲ್ಲೋಲವಾಗುತ್ತಿದೆ. ಬೆಂಗಳೂರು ನರಕವಾಗುತ್ತಿದೆ. ಇಲ್ಲಿ ಕುಡಿಯಲು ನೀರಿಲ್ಲ. ಆಟೋರಿಕ್ಷಾಗಳು ಓಡುತ್ತಿಲ್ಲ. ವಾಹನಗಳು ನಿಂತಿವೆ. ಹೋಟೆಲ್‌ಗಳು ಮುಚ್ಚಿವೆ. ಇದೇ ಪರಿಸ್ಥಿತಿ ಮುಂದುವರೆದರೆ ರಾಜ್ಯ ಭಾರೀ ಸಂಕಷ್ಟಕ್ಕೆ ಈಡಾಗಲಿದೆ. ರಾಜ್ಯದ ವಿಧಾನಸಭಾ ಸದಸ್ಯರು ಕೇಂದ್ರದ ಪ್ರಧಾನಮಂತ್ರಿ ನರೇಂದ್ರಮೋದಿ ಅವರೊಂದಿಗೆ ಚರ್ಚಿಸಿ ರಾಜ್ಯಕ್ಕೆ ಬೇಕಾದ ಎಲ್ಲಾ ರೀತಿಯ ನೆರವನ್ನು ಕೋರಬೇಕಾಗಿರುವುದು ಅನಿವಾರ್ಯವಾಗಿದೆ.

ಪ್ರಪಂಚದಲ್ಲಿ ಒಕ್ಕೊರಲಿನ ಮಾತು ಯುದ್ಧ ನಿಲ್ಲಬೇಕೆಂಬುದು ಆಗಿದೆ. ಈ ಯುದ್ಧವು ಅಮೆರಿಕಾ, ಇಸ್ರೇಲ್ ಮತ್ತು ಇರಾನ್ ಈ ಮೂರು ದೇಶಗಳಿಗೆ ಸಂಬಂಧಿಸಿಲ್ಲ. ಈ ಯುದ್ಧದಿಂದಾಗಿ ಇಡೀ ಪ್ರಪಂಚದ ಉದ್ದಕ್ಕೂ ಕಣ್ಣೀರು ಹಾಕುವ ಪರಿಸ್ಥಿತಿ ಉಂಟಾಗಿದೆ. ಸಣ್ಣಪುಟ್ಟ ರಾಜ್ಯ, ದೇಶಗಳು ಇದರಿಂದ ಹೊರತಾಗಿಲ್ಲ. ಮೊದಲಿಗೆ ಯುದ್ಧವನ್ನು ನಿಲ್ಲಿಸಬೇಕಾಗಿದೆ. ಆದರೆ ಅಮೆರಿಕಾ 50 ಸಾವಿರ ಸೈನಿಕರನ್ನು ಇರಾನ್‌ಗೆ ನುಗ್ಗಿಸಿ ಸಂಪೂರ್ಣ ಇರಾನ್ ದೇಶವನ್ನು ನಾಶ ಮಾಡಲು ಹೊರಟಿದೆ.

ಮುಂದಿನ 18 ದಿನಗಳೊಳಗೆ ಯುದ್ಧ ನಿಲ್ಲಿಸದಿದ್ದರೆ, ಇಡೀ ಅಖಂಡ ಕರ್ನಾಟಕವನ್ನು ಬಂದ್ ಮಾಡಿ ಯುದ್ಧ ನಿಲ್ಲಿಸಬೇಕೆಂದು ಒತ್ತಾಯಿಸುತ್ತೇವೆ. ಯುದ್ಧ ನಿಲ್ಲುವವರೆಗೂ ರಾಮನಗರ, ಮಂಡ್ಯ ಮತ್ತು ಮೈಸೂರಿನಿಂದಲೇ ಚಾಲನೆ ನೀಡಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಕರುನಾಡ ಸೇನೆ ರಾಜ್ಯ ಉಪಾಧ್ಯಕ್ಷ ಎಂ.ಜಗದೀಶ್ ಐಜೂರು, ರಾಜ್ಯ ಉಸ್ತುವಾರಿ ಗಂಗಾಧರ್ ವಿ.ಎನ್. ಜಿಲ್ಲಾಧ್ಯಕ್ಷ ಜಯಕುಮಾರ್, ದಲಿತ ಘಟಕದ ಜಿಲ್ಲಾಧ್ಯಕ್ಷ ಜಯರಾಮು, ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಕುಮಾರ್, ತಾಲ್ಲೂಕು ಉಪಾಧ್ಯಕ್ಷ ಕರುನಾಡ ಜಯಕುಮಾರ್, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಪುಷ್ಪಲತಾ, ವಾಟಾಳ್ ನಾಗರಾಜ್ ಅವರ ಆಪ್ತ ಕಾರ್ಯದರ್ಶಿ ಪಾರ್ಥಸಾರಥಿ ಇದ್ದರು.

# ವಿದ್ಯಾರ್ಥಿಗಳಿಗೆ ಶಿಸ್ತು ಯಶಸ್ಸಿನ ಮೂಲಮಂತ್ರ: ನೋಬಲ್ ಹಾರ್ಟ್ಸ್ ಸಂಸ್ಥೆಯ ಮುಖ್ಯಸ್ಥ ಸತ್ಯಪ್ರಸಾದ್ ಅಭಿಮತ

ರಾಮನಗರ: ವಿದ್ಯಾರ್ಥಿ ಜೀವನದಲ್ಲಿ ಶಿಸ್ತು ಎನ್ನುವುದು ಯಶಸ್ಸಿನ ಮೂಲಮಂತ್ರವಾಗಿದ್ದು, ಸಮಯ ಮತ್ತು ನಿಯಮ ಪಾಲನೆ ಜತೆಗೆ ಉತ್ತಮ ನಡವಳಿಕೆಯನ್ನು ಒಳಗೊಂಡಿರುವ ಶಿಸ್ತಿನ ಜೀವನ ಜವಾಬ್ದಾರಿಯುತ ನಾಗರಿಕರನ್ನಾಗಿ ರೂಪಿಸಿ, ಉಜ್ವಲ ಭವಿಷ್ಯಕ್ಕೆ ಅಡಿಪಾಯ ಹಾಕುತ್ತದೆ ಎಂದು ನೋಬಲ್ ಹಾರ್ಟ್ಸ್ ಸಂಸ್ಥೆಯ ಮುಖ್ಯಸ್ಥ ಸತ್ಯಪ್ರಸಾದ್ ಹೇಳಿದರು.

ಬಿಡದಿ ಹೋಬಳಿ ತೊರೆದೊಡ್ಡಿ(ಅಂಗರಹಳ್ಳಿ) ಸರಕಾರಿ ಪ್ರೌಢಶಾಲೆಯಲ್ಲಿ ನಡೆದ ಪರಿಕರ ವಿತರಣೆ ಕಾರ್ಯಕ್ರಮದಲ್ಲಿ ಶಿಸ್ತಿನ ಬಗ್ಗೆ ಮಾತನಾಡಿ, ವಿದ್ಯಾರ್ಥಿ ಜೀವನದಲ್ಲಿ ಅಳವಡಿಸಿಕೊಳ್ಳುವ ಶಿಸ್ತು ಭವಿಷ್ಯದಲ್ಲಿ ಯಶಸ್ಸನ್ನು ನಿರ್ಧರಿಸುತ್ತದೆ ಹಾಗೂ ಸಮಯದ ಮಹತ್ವವನ್ನು ಕಲಿಸುತ್ತದೆ. ವಿದ್ಯಾರ್ಥಿಯಲ್ಲಿ ಶಿಸ್ತು ಸಕಾರಾತ್ಮಕ ವರ್ತನೆಯನ್ನು ಬೆಳೆಸುತ್ತದೆ. ಕೆಟ್ಟ ಅಭ್ಯಾಸಗಳಿಂದ ದೂರವಿರಲು ಮತ್ತು ಕಷ್ಟದ ಸಂದರ್ಭಗಳಲ್ಲಿ ಧೈರ್ಯದಿಂದಿರಲು ಕಲಿಸುತ್ತದೆ ಎಂದರು.

ಶಿಕ್ಷಕರು, ಪೋಷಕರು ಹಾಗೂ ಹಿರಿಯರನ್ನು ಗೌರವಿಸುವುದು ಕೂಡ ಶಿಸ್ತಿನ ಲಕ್ಷಣವೇ ಎಂದ ಅವರು ಶಿಸ್ತುಬದ್ಧ ವಿದ್ಯಾರ್ಥಿಯು ಆತ್ಮವಿಶ್ವಾಸವನ್ನು ಹೊಂದಿದ್ದು ಆತನು ಶೈಕ್ಷಣಿಕವಾಗಿ ಮಾತ್ರವಲ್ಲದೆ, ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲೂ ಸಾಧಕನಾಗಬಹುದು. ಆದ್ದರಿಂದ, ಪ್ರತಿಯೊಬ್ಬ ವಿದ್ಯಾರ್ಥಿಯು ಬಾಲ್ಯದಿಂದಲೇ ಶಿಸ್ತನ್ನು ಅಳವಡಿಸಿಕೊಂಡು, ಜವಾಬ್ದಾರಿಯುತ ನಾಗರಿಕರಾಗಿ ದೇಶದ ಅಭಿವೃದ್ಧಿಗೆ ಕೊಡುಗೆ ನೀಡಬೇಕು



ಎಂದು ತಿಳಿಸಿದರು.

ನಮ್ಮ ನೋಬಲ್ ಹಾರ್ಟ್ಸ್ ಸಂಸ್ಥೆಯು ಎಲ್ಲಿಯೂ ನೋಂದಾಯಿತವಾಗಿರದೆ ಜನಮನದಲ್ಲಿ ಸ್ಥಾಪಿತವಾಗಿದೆ. ಕಳೆದ ಎರಡು ದಶಕಗಳಿಂದ ಸಾಮಾಜಿಕ ಹಾಗೂ ಶೈಕ್ಷಣಿಕ ಕ್ಷೇತ್ರಗಳಲ್ಲಿ ಆರ್ಥಿಕ ಮುಗ್ಗಟ್ಟು ಎದುರಿಸುತ್ತಿರುವ ಸೇವಾ ಸಂಸ್ಥೆಗಳಿಗೆ ಸುಮಾರು ಎರಡೂವರೆ ಕೋಟಿಗೂ ಮಿಗಿಲಾದ ನಿಧಿಯ ನೆರವು ನೀಡಿದೆ. 2008ರಲ್ಲಿ ಬೆಂಗಳೂರಿನ ಪ್ರೇರಣಾ ರಿಸೋರ್ಸ್ ಸೆಂಟರ್ ನಡೆಸುತ್ತಿರುವ 120 ಅನಾಥ ಹಾಗೂ ವಿಶೇಷಚೇತನ ಹೆಣ್ಣುಮಕ್ಕಳ ಊಟ ಮತ್ತು ವಸತಿ ಸೌಲಭ್ಯಕ್ಕಾಗಿ 21 ಲಕ್ಷರೂ ಸಹಾಯಧನ ನೀಡಿದೆ.

2010ರಲ್ಲಿ ಅಂತರಾಷ್ಟ್ರಿಯ ಪ್ಯಾರಾ ಒಲಂಪಿಕ್ ಕ್ರಿಡಾಪಟು ಪದ್ಮಶ್ರೀ ಡಾ.ಮಾಲತಿ ಹೊಳ್ಳರವರು ಪೋಲಿಯೋ ಪೀಡಿತ ಮಕ್ಕಳಿಗಾಗಿ ನಡೆಸುತ್ತಿರುವ ಮಾತೃ ಫೌಂಡೇಶನ್ ಸಂಸ್ಥೆಗೆ ಒಂದೂವರೆ ಕೋಟಿ ನೆರವು ನೀಡಿದೆ. 2014ರಲ್ಲಿ ಸುಭಾಷಿಣಿವಸಂತ್‌ರವರು ಹುತಾತ್ಮ ಸೈನಿಕರ ಮಕ್ಕಳಿಗಾಗಿ ನಡೆಸುತ್ತಿರುವ ವಸಂತರತ್ನ ಫೌಂಡೇಶನ್ ಫಾರ್ ಆರ್ಟ್ಸ್ ಸಂಸ್ಥೆಗೆ 21 ಲಕ್ಷರೂ. 2016ರಲ್ಲಿ ಶಂಕರ ಕ್ಯಾನ್ಸರ್ ಆಸ್ಪತ್ರೆ ಮತ್ತು ಬೆಂಗಳೂರು ಕಿಡ್ನಿ ಫೌಂಡೇಶನ್ ಸಂಸ್ಥೆಗಳಲ್ಲಿ ಚಿಕಿತ್ಸೆ ಪಡೆಯುತ್ತಿರುವ ಬಡರೋಗಿಗಳಿಗೆ 28 ಲಕ್ಷರೂ ನಿಧಿ ಪ್ರಧಾನ ಮಾಡಲಾಗಿದೆ ಎಂದು ಸಂಸ್ಥೆಯ ಸಾಮಾಜಿಕ ಕಾರ್ಯಕ್ರಮಗಳ ಬಗ್ಗೆ ಬೆಳಕು ಚಲ್ಲಿದರು.

ಇದೇ ವೇಳೆ ಸರಕಾರಿ ಪ್ರೌಢಶಾಲೆಯ ಕೊಠಡಿಗಳಿಗೆ 5 ಸೆಟ್ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಸಾಹಿತಿಗಳ ಫೋಟೋಗಳು, ಶಾಲೆಯ ಖೋಖೋ ಕ್ರೀಡಾವಿದ್ಯಾರ್ಥಿಗಳಿಗೆ ಕ್ರೀಡಾ ಸಮವಸ್ತ್ರ ಹಾಗೂ ಗ್ರಂಥಾಲಯಕ್ಕೆ ಪುಸ್ತಕಗಳ ಕೊಡುಗೆ ನೀಡಿದರು.

ನೋಬಲ್ ಹಾರ್ಟ್ಸ್ ಸಂಸ್ಥೆಯ ಸದಸ್ಯರಾದ ಗೋಪಾಲ್, ಶಶಿಕಲಾ, ರಾ.ಶಿ.ವೆಂಕಟೇಶ್, ಶೈಲಜಾ, ರಾಘವೇಂದ್ರ, ಎಂ.ಸತೀಶ್, ಸಾವಿತ್ರಮ್ಮ, ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಕೃಷ್ಣಮೂರ್ತಿ, ಶಾಲೆಯ ಪೋಷಕರಾದ ಇಟ್ಟಮಡು ಸೋಮಣ್ಣ(ಚನ್ನಪ್ಪ), ಮುಖ್ಯಶಿಕ್ಷಕಿ ಜಯಶ್ರೀ, ಸಹಶಿಕ್ಷಕರಾದ ಅನಿತಾ, ಜ್ಯೋತಿ, ರಮ್ಯ, ಮರಿಸ್ವಾಮಿ, ವಿದ್ಯಾಶ್ರೀ, ಗೌರಮ್ಮ ಮುಂತಾದವರು ಇದ್ದರು. ಶಾಲಾ ಅಭಿವೃದ್ಧಿ ಸಮಿತಿ ಹಾಗೂ ಶಿಕ್ಷಕ ಸಿಬ್ಬಂದಿ ಗಣ್ಯರನ್ನು ಅಭಿನಂದಿಸಿದರು.

# 2 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗೆ ಶಾಸಕ ಇಕ್ಬಾಲ್ ಹುಸೇನ್ ಚಾಲನೆ

ರಾಮನಗರ: ನಗರದ ಚಾಮುಂಡಿಪುರದಲ್ಲಿನ ಸಂಜೀವಿನಿ ಬಡಾವಣೆಗೆ ರಸ್ತೆ, ಚರಂಡಿ ಸೇರಿದಂತೆ ಮೂಲಸೌಕರ್ಯ ಕಲ್ಪಿಸಲು 2 ಕೋಟಿ ವಿಶೇಷ ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಶಾಸಕ ಹೆಚ್.ಎ.ಇಕ್ಬಾಲ್ ಹುಸೇನ್ ತಿಳಿಸಿದರು.

ನಗರದ ಬಿಳಗುಂಬ ರಸ್ತೆಯಲ್ಲಿರುವ ಸಂಜೀವಿನಿ ಬಡಾವಣೆಯಲ್ಲಿ ಮಂಗಳವಾರ ವಿವಿಧ ರಸ್ತೆ, ಚರಂಡಿ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿ ಮಾತನಾಡಿದ ಅವರು, ಸಂಜೀವಿನಿ ಲೇಔಟ್ ನಿರ್ಮಾಣವಾಗಿ ಅನೇಕ ವರ್ಷಗಳು ಕಳೆದಿದ್ದರೂ ಸಹ ವಸತಿ ಬಡಾವಣೆಗೆ ಸೂಕ್ತವಾದ ರಸ್ತೆ ಚರಂಡಿ ಸಹಿತ ಮೂಲಭೂತ ಸೌಕರ್ಯ ಒಳಚರಂಡಿ ವ್ಯವಸ್ಥೆಯಿಲ್ಲ. ಅಧಿಕಾರಿಗಳು ನಿವೇಶನ ಖರೀದಿಸಿ ಮನೆ ಮಾಡಿಕೊಂಡಿದ್ದಾರೆ. ಹಾಗಾಗಿ 2 ಕೋಟಿ ರೂ. ವಿಶೇಷ ಅನುದಾನದಲ್ಲಿ ಮೂಲಸೌಕರ್ಯ ಕಲ್ಪಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ನಗರದಲ್ಲಿ ವಿವಿಧ ಬಡಾವಣೆಗಳ ಅಭಿವೃದ್ಧಿಗೂ ಅನುದಾನ ಕೊಡಿಸಲಾಗುವುದು ಎಂದರು.

ಜಿಲ್ಲಾಕೇಂದ್ರ ರಾಮನಗರದ ಅಭಿವೃದ್ಧಿಗೆ 100 ಕೋಟಿ ರೂಗಳ ಅನುದಾನ ಬಿಡುಗಡೆ ಮಾಡಿದ್ದು, ಪ್ರವಾಹದಿಂದ ಸಾಕಷ್ಟು ಸಮಸ್ಯೆಯಾಗಿದ್ದ ಸೀರಹಳ್ಳಕ್ಕೆ ಕಾಂಕ್ರೀಟ್ ತಡೆಗೋಡೆ ನಿರ್ಮಿಸಲಾಗಿದೆ. ಇದರಿಂದಾಗಿ ಮಳೆಗಾಲದಲ್ಲಿ ಸೀರೆಹಳ್ಳದಿಂದ ಅರ್ಕೇಶ್ವರ ಕಾಲೋನಿ ಮತ್ತಿತರ ವಸತಿ ಬಡಾವಣೆಗಳಿಗೆ ಉಂಟಾಗುತ್ತಿದ್ದ ಸಮಸ್ಯೆಗೆ ಪರಿಹಾರ ದೊರೆತಂತಾಗಿದೆ. ಹಾಗೆಯೇ ವಿಶೇಷ ಅನುದಾನದಲ್ಲಿ ನಗರದಲ್ಲಿ ಮತ್ತಷ್ಟು ಮೂಲಭೂತ ಸೌಕರ್ಯದ ಕಾಮಗಾರಿಗಳು ನಡೆದಿವೆ. ಒಂದಷ್ಟು ಕಡೆ ಕಾಮಗಾರಿಗಳ ಕೆಲಸ ನನಗೆ ತೃಪ್ತಿತಂದಿಲ್ಲ. ಲೋಪ ಸರಿಪಡಿಸುವಂತೆ ಅಧಿಕಾರಿಗಳಿಗೆ ತಿಳಿಸಿದ್ದೇನೆ ಎಂದರು.

ಕ್ಷೇತ್ರದ ಜನರಿಗೆ ಬೇಸಿಗೆ ದಿನಗಳಲ್ಲಿ ನೀರಿಗೆ ಸಮಸ್ಯೆಯಾಗದಂತೆ ಎಚ್ಚರ ವಹಿಸಲಾಗಿದೆ. ಗ್ರಾಮೀಣ ಭಾಗದ ಕೆಲವು ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಿದೆ. ಈಗಾಗಲೇ ಸಂಬಂಧಿಸಿದ ಅಧಿಕಾರಿಗಳ ಜತೆ ಮಾತನಾಡಿ ಸಮಸ್ಯೆಯಾಗದಂತೆ ಎಚ್ಚರವಹಿಸಲು ತಿಳಿಸಲಾಗಿದೆ. ಹಾರೋಹಳ್ಳಿ ಮರಳವಾಡಿ ಹೋಬಳಿಯ ಗ್ರಾಮಗಳಿಗೆ ಒಂದು, ಕೈಲಾಂಚ ಕಸಬಾ ಹೋಬಳಿಯಲ್ಲಿ ಒಂದು ಬೋರ್‌ವೆಲ್ ಯಂತ್ರದ ಲಾರಿ ನಿಯೋಜಿಸಿದ್ದು ನೀರಿನ ಅಭಾವ ಇರುವ ಸ್ಥಳಗಳಲ್ಲಿ ಬೋರ್ ಕೊರೆದು ಸಮಸ್ಯೆ ನೀಗಿಸಲಾಗುತ್ತಿದೆ ಎಂದು ತಿಳಿಸಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎ.ಬಿ.ಚೇತನ್‌ಕುಮಾರ್, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವಿ.ಎಚ್.ರಾಜು, ಶ್ರೀನಿವಾಸ್, ವೆಂಕಟಸ್ವಾಮಿ ಮತ್ತಿತರರು ಇದ್ದರು.

# ನಡೆದಾಡಿದ ದೇವರು, ತ್ರಿವಿಧ ದಾಸೋಹಿ, ಶ್ರೀ ಶಿವಕುಮಾರಮಹಾಸ್ವಾಮೀಜಿ 119 ನೇ ಜನ್ಮ ದಿನಾಚರಣೆ

ಹುಳಿಯಾರು : ನಡೆದಾಡಿದ ದೇವರು, ತ್ರಿವಿಧ ದಾಸೋಹಿ, ಕರ್ನಾಟಕ ರತ್ನ ಪರಮಪೂಜ್ಯ ಡಾ. ಶ್ರೀ ಶ್ರೀ ಶ್ರೀ ಶಿವಕುಮಾರ ಮಹಾಸ್ವಾಮೀಜಿಗಳ 119 ನೇ ಜನ್ಮದಿನೋತ್ಸವ ಕಾರ್ಯಕ್ರಮವನ್ನು ಹುಳಿಯಾರಿನ ರಾಮಗೋಪಾಲ್ ಸರ್ಕಲ್ ಬಳಿಯ ಶ್ರೀ ಭೈರವೇಶ್ವರ ಮೆಡಿಕಲ್ಸ್ ಮುಂಭಾಗದಲ್ಲಿ ಚನ್ನಬಸವಯ್ಯ ಅವರ ನೇತೃತ್ವದಲ್ಲಿ ಅತ್ಯಂತ ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಶ್ರೀಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದ ಮಾಜಿ ಶಾಸಕ ಕೆ.ಎಸ್. ಕಿರಣ್ ಕುಮಾರ್ ಅವರು ಮಾತನಾಡಿ, ಡಾ. ಶಿವಕುಮಾರ ಸ್ವಾಮೀಜಿಯವರು ಇಡೀ ವಿಶ್ವಕ್ಕೆ ಮಾದರಿಯಾದವರು. ಅವರ ದಾಸೋಹ ಸಂಸ್ಕೃತಿ ಮತ್ತು ಬದುಕಿನ ಆದರ್ಶಗಳನ್ನು ನಾವೆಲ್ಲರೂ ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಶಾಸಕ ಸಿ. ಬಿ. ಸುರೇಶ್ ಬಾಬು ಅವರು ಶ್ರೀಗಳ ಸೇವೆಯನ್ನು ಸ್ಮರಿಸಿ ಮಾತನಾಡಿ, ಸಾವಿರಾರು ವಿದ್ಯಾರ್ಥಿಗಳಿಗೆ ಅಕ್ಷರ ಮತ್ತು ಅನ್ನದ ದಾಸೋಹ ನೀಡಿದ ಸಿದ್ಧಗಂಗಾ ಮಠವು ಒಂದು ಪುಣ್ಯಕ್ಷೇತ್ರ. ಶ್ರೀಗಳು




ಇತರ ಮಠಗಳಂತೆ ಶಾಖಾ ಮಠಗಳನ್ನು ತೆರೆಯಲು ಮುಂದಾಗದೆ, ಒಂದೇ ಮಠದ ಮೂಲಕ ಲಕ್ಷಾಂತರ ವಿದ್ಯಾರ್ಥಿಗಳ ಬದುಕನ್ನು ರೂಪಿಸಿದ್ದಾರೆ. ಇಂದು ದೇಶ ವಿದೇಶಗಳಲ್ಲಿ ಇಲ್ಲಿನ ವಿದ್ಯಾರ್ಥಿಗಳು ವೈದ್ಯರಾಗಿ, ಇಂಜಿನಿಯರ್ ಆಗಿ ಸೇವೆ ಸಲ್ಲಿಸುತ್ತಿರುವುದು ಶ್ರೀಗಳ ಮಾರ್ಗದರ್ಶನದ ಶಕ್ತಿಯಾಗಿದೆ. ಜಿಲ್ಲೆಯ ಯಾವುದೇ ಅಭಿವೃದ್ಧಿ ಕಾರ್ಯಗಳಿಗೆ ಶ್ರೀಗಳ ಆಶೀರ್ವಾದವೇ ನಮಗೆ ದಾರಿದೀಪ ಎಂದರು.

ಕಾರ್ಯಕ್ರಮದ ಅಂಗವಾಗಿ ಮಧ್ಯಾಹ್ನದವರೆಗೆ ನೂರಾರು ಭಕ್ತಾದಿಗಳಿಗೆ ಲಘು ಉಪಹಾರ ಹಾಗೂ ಪಾಯಸ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ವಿದ್ಯಾವಾರಿಧಿ ಇಂಟರ್ನ್ಯಾಷನಲ್ ಶಾಲೆಯ ಕಾರ್ಯದರ್ಶಿ ಕವಿತಾ ಕಿರಣ್ ಕುಮಾರ್, ಜಿಲ್ಲಾ ಕರವೇ ಉಪಾಧ್ಯಕ್ಷ ಮೆಡಿಕಲ್ ಚನ್ನಬಸವಯ್ಯ, ತಾಲೂಕು ಕರವೇ ಅಧ್ಯಕ್ಷ ಪ್ರಕಾಶ್, ಹುಳಿಯಾರು ಘಟಕದ ಅಧ್ಯಕ್ಷ ಗೌಡಿ, ಶ್ರೀ ದುರ್ಗಾಪರಮೇಶ್ವರಿ ದೇವಸ್ಥಾನದ ಧರ್ಮದರ್ಶಿ ದಯಾನಂದ್, ಕೌನ್ಸಿಲರ್ ಹೇಮಂತ್ ಕುಮಾರ್, ಮಾಜಿ ಕೌನ್ಸಿಲರ್ ರಾಘವೇಂದ್ರ, ಬಾಲರಾಜು, ರವಿರಾಜ್, ತಮ್ಮಯ್ಯ, ಡಾ. ಚಂದ್ರಧರ್, ಬಾಳೆಕಾಯಿ ಲಕ್ಷ್ಮಿಕಾಂತ್, ಹರೀಶ್, ಧನಂಜಯ್, ರಘುನಾಥ್, ಯೋಗೇಶ್ ಸೇರಿದಂತೆ ಅನೇಕರು ಹಾಜರಿದ್ದರು.

# ವಿವೇಕಾನಂದ ಸ್ಪೋರ್ಟ್ಸ್ ಕ್ಲಬ್ ವತಿಯಿಂದ ಶಿವಕುಮಾರ ಸ್ವಾಮೀಜಿಯವರ 119ನೇ ಜಯಂತಿ



ತುಮಕೂರು: ವಿವೇಕಾನಂದ ಸ್ಪೋರ್ಟ್ಸ್ ಕ್ಲಬ್ ವತಿಯಿಂದ ನಗರದ ಭದ್ರಮ್ಮ ವೃತ್ತದಲ್ಲಿ ತ್ರಿವಿಧ ದಾಸೋಹಿ, ನಡೆದಾಡುವ ದೇವರು ಎಂದು ಖ್ಯಾತರಾದ ಶ್ರೀ ಶಿವಕುಮಾರ ಸ್ವಾಮೀಜಿಯವರ 119ನೇ ಜಯಂತಿಯನ್ನು ಅನ್ನ ಸಂತರ್ಪಣೆ ಮಾಡುವ ಮೂಲಕ ಆಚರಿಸಲಾಯಿತು.

ಕಾರ್ಯಕ್ರಮದ ಕುರಿತು ಮಾಹಿತಿ ನೀಡಿದ ವಿವೇಕಾನಂದ ಸ್ಪೋರ್ಟ್ಸ್ ಕ್ಲಬ್ ಅಧ್ಯಕ್ಷರಾದ ಎಚ್.ಡಿ. ಕುಮಾರಸ್ವಾಮಿ ಅವರು, ಪ್ರತಿ ವರ್ಷದಂತೆ ಈ ವರ್ಷವೂ ಸಹ ಕ್ಲಬ್ ವತಿಯಿಂದ ಶ್ರೀ ಶಿವಕುಮಾರ ಸ್ವಾಮೀಜಿಯವರ ಜಯಂತಿಯನ್ನು ಆಚರಿಸಲಾಗುತ್ತಿದೆ. ಎಲ್ಲಾ ವಯಸ್ಸಿನವರು ಭೇದಭಾವವಿಲ್ಲದೆ ಒಂದಾಗಿ ಸೇರಿ ದಾಸೋಹ ಸೇವೆಯನ್ನು ನಡೆಸುತ್ತಾ ಬಂದಿದ್ದೇವೆ ಎಂದು ಹೇಳಿದರು.

ನಂತರ ಮಾತನಾಡಿದ ಖಜಾಂಚಿ ಹರೀಶ್ ಅವರು, ವಿಶ್ವವೇ ಕಂಡಂತ ತ್ರಿವಿಧ ದಾಸೋಹಿ ಶ್ರೀ ಶಿವಕುಮಾರ ಸ್ವಾಮೀಜಿಯವರ 119ನೇ ಜಯಂತಿಯ ಅಂಗವಾಗಿ ತುಮಕೂರು ವಿವೇಕಾನಂದ ಸ್ಪೋರ್ಟ್ಸ್ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ ಅನ್ನದಾಸೋಹವನ್ನು ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಸುಮಾರು ಒಂದರಿಂದ ಎರಡು ಸಾವಿರ ಜನರು ಭಾಗವಹಿಸಿದ್ದು, ಅನೇಕರು ಸ್ವಯಂ ಪ್ರೇರಿತರಾಗಿ ದಾಸೋಹ ಸೇವೆಯಲ್ಲಿ ಪಾಲ್ಗೊಂಡಿದ್ದಾರೆ ಎಂದು ತಿಳಿಸಿದರು.

ನಿರ್ದೇಶಕ ಪ್ರದೀಪ್ ಕುಮಾರ್ ಅವರು ಮಾತನಾಡುತ್ತ ವಿವೇಕಾನಂದ ಸ್ಪೋರ್ಟ್ಸ್ ಸಂಸ್ಥೆಯು ಕಳೆದ 10 ವರ್ಷಗಳಿಂದ ನಿರಂತರವಾಗಿ ಶ್ರೀ ಶಿವಕುಮಾರ ಸ್ವಾಮೀಜಿಯವರ ಜಯಂತಿಯನ್ನು ಅನ್ನ ಸಂತರ್ಪಣೆ ಮಾಡುವ ಮೂಲಕ ಸೇವಾ ಕಾರ್ಯವನ್ನು ನಡೆಸಿಕೊಂಡು ಬರುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಧ್ಯಕ್ಷರಾದ ಎಚ್.ಡಿ. ಕುಮಾರಸ್ವಾಮಿ, ಕಾರ್ಯದರ್ಶಿ ವಿನಯ್ ಕುಮಾರ್, ಖಜಾಂಚಿ ಹರೀಶ್, ನಿರ್ದೇಶಕರಾದ ಪ್ರದೀಪ್, ಗುರುಪ್ರಸಾದ್ ಸೇರಿದಂತೆ ಸಂಸ್ಥೆಯ ಎಲ್ಲಾ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಇಂದು ಶ್ರೀದೇವಿ ವೈದ್ಯಕೀಯ ಕಾಲೇಜಿನಲ್ಲಿ "ಕ್ರೀಡಾ ವಾರ್ಷಿಕೋತ್ಸವ"-2026

ತುಮಕೂರು: ನಗರದ ಶಿರಾರಸ್ತೆಯ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಆಸ್ಪತ್ರೆಯ ವತಿಯಿಂದ ಕ್ರೀಡಾ ವಾರ್ಷಿಕೋತ್ಸವವನ್ನು ಶ್ರೀದೇವಿ ವೈದ್ಯಕೀಯ ಕಾಲೇಜಿನ ಆವರಣದಲ್ಲಿ ಏ.2 (ಇಂದು) ಗುರುವಾರ ಬೆಳಿಗ್ಗೆ 10:30 ಕ್ಕೆ ಗಂಟೆಗೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಅಧ್ಯಕ್ಷರಾದ ಡಾ.ಎಂ.ಆರ್.ಹುಲಿನಾಯ್ಕರ್ ರವರು ವಹಿಸಲಿದ್ದಾರೆ. ಹಾಗೂ ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಟ್ರಸ್ಟಿಯಾದ ಶ್ರೀಮತಿ.ಶಾಂತಾದುರ್ಗಾದೇವಿ ಹುಲಿನಾಯ್ಕರ್, ಶ್ರೀದೇವಿ ಸಮೂಹ ಶಿಕ್ಷಣ ಸಂಸ್ಥೆಯ ನಿರ್ದೇಶಕರು ಹಾಗೂ ಟ್ರಸ್ಟಿ ಡಾ.ರಮಣ್ ಆರ್ ಹುಲಿನಾಯ್ಕರ್‌ರವರು ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ಗೌರವ ಅತಿಥಿಗಳಾಗಿ ಶ್ರೀದೇವಿ ಸಂಸ್ಥೆಯ ಮಾನವ ಸಂಪನ್ಮೂಲ ವಿಭಾಗದ ನಿರ್ದೇಶಕರಾದ ಎಂ.ಎಸ್. ಪಾಟೀಲ್, ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಟ್ರಸ್ಟಿಯಾದ ಶ್ರೀಮತಿ. ಅಂಬಿಕಾ ಎಂ ಹುಲಿನಾಯ್ಕರ್, ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಟ್ರಸ್ಟಿ ಹಾಗೂ ನೇತ್ರತಜ್ಞರಾದ ಡಾ.ಲಾವಣ್ಯರವರು ಭಾಗವಹಿಸಲಿದ್ದಾರೆ.

ಇದೇ ಸಂದರ್ಭದಲ್ಲಿ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಎಂ.ಎಲ್.ಹರೇಂದ್ರಕುಮಾರ್, ಶ್ರೀದೇವಿ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕರಾದ ಡಾ.ಕೆ.ಮೋಹನ್‌ಕುಮಾರ್, ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯದ ಉಪಪ್ರಾಂಶುಪಾಲರಾದ ಡಾ.ರೇಖಾಗುರುಮೂರ್ತಿ, ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯದ ಉಪಪ್ರಧಾನ ಆಡಳಿತ ವಿಭಾಗದ ಉಪಪ್ರಾಂಶುಪಾಲರಾದ ಡಾ.ಹೇಮಂತ್‌ರಾಜ್ ಹಾಗೂ ವಿವಿಧ ವಿಭಾಗದ ಮುಖ್ಯಸ್ಥರು ಪ್ರಾಧ್ಯಾಪಕ, ಬೋಧಕ-ಬೋಧಕೇತರ ಸಿಬ್ಬಂದಿ ವರ್ಗದವರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

# ಇತಿಹಾಸ ಪ್ರಸಿದ್ಧ ಶ್ರೀ ಮಲ್ಲೇಶ್ವರಸ್ವಾಮಿ ಪಾರ್ವತಿ ದೇವಿಯವರ ಜಾತ್ರಾ ಮಹೋತ್ಸವ

ತುಮಕೂರು: ತಾಲ್ಲೂಕಿನ ಹಾಲನೂರು ಗ್ರಾಮದಲ್ಲಿ ಇತಿಹಾಸ ಪ್ರಸಿದ್ಧ ಶ್ರೀ ಮಲ್ಲೇಶ್ವರಸ್ವಾಮಿ ಹಾಗೂ ಪಾರ್ವತಿದೇವಿಯವರ ಜಾತ್ರಾ ಮಹೋತ್ಸವ ಹಾಗೂ ಬ್ರಹ್ಮ ರಥೋತ್ಸವವು ಸಾವಿರಾರು ಭಕ್ತಾದಿಗಳ ಸಮ್ಮುಖದಲ್ಲಿ ನೆರವೇರಿತು. ಮಂಗಳವಾರ ಮಧ್ಯಾಹ್ನ ಸುಮಾರು 1 ಗಂಟೆಗೆ ಬೆಳ್ಳಾವಿಯ ಶ್ರೀ ಕಾರದ ವೀರಬಸವ ಸ್ವಾಮಿಗಳು ರಥೋತ್ಸವಕ್ಕೆ ಚಾಲನೆ ನೀಡಿದರು. ಭಕ್ತರು ಸಂಭ್ರಮದಿಂದ ರಥದ ಮೇಲೆ ಬಾಳೆಹಣ್ಣು ಎಸೆಯುವ ಮೂಲಕ ಇಷ್ಟಾರ್ಥಗಳ ಸಿದ್ಧಿಗಾಗಿ ಪ್ರಾರ್ಥಿಸಿದರು.

ಜಿಲ್ಲೆ ಸೇರಿದಂತೆ ಹೊರ ಜಿಲ್ಲೆಗಳಿಂದಲೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಂಡರು. ಬಂದ ಭಕ್ತಾದಿಗಳಿಗೆ ಅನ್ನದಾಸೋಹದ ವ್ಯವಸ್ಥೆ ಕಲ್ಪಿಸಲಾಗಿತ್ತು. ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಹೆಚ್.ಆರ್.ವೀರೇಶ್ ಕುಮಾರ್ ಹಾಗೂ ದೇವಸ್ಥಾನದ ಅಧ್ಯಕ್ಷರಾದ ಹಾಲನೂರು ಲೇಪಾಕ್ಷಿ ಅವರು ಮಾತನಾಡಿ ಕ್ಷೇತ್ರದ ಪೌರಾಣಿಕ ಮಹತ್ವವನ್ನು ವಿವರಿಸಿದರು.

ಯಡಿಯೂರಿನ ಸಿದ್ಧಲಿಂಗೇಶ್ವರ ಸ್ವಾಮಿಗಳು ತಪಸ್ಸು ಮಾಡಿದ ಸ್ಥಳದಲ್ಲಿ ಹಸು ಕಲ್ಲಿನ ಮೇಲೆ ಹಾಲು ಕರೆಯುವಂತೆ ಇಲ್ಲಿಯೂ ಕೂಡ ಹಸು ಕಲ್ಲಿನ ಮೇಲೆ ಹಾಲು ಕರೆಯುತ್ತಿದ್ದು, ಆ ಸ್ಥಳದಲ್ಲಿ ಶಿವಲಿಂಗ ಉದ್ಭವಿಸಿತು ಎಂದು ತಿಳಿಸಿದರು. ಆದ್ದರಿಂದಲೇ ಈ ಗ್ರಾಮಕ್ಕೆ ಹಾಲನೂರು ಗ್ರಾಮ ಎಂದು ಹೆಸರಾಯಿತು ಎಂದು ದೇವರಿಗೆ ಹಾಲು ಮಲ್ಲೇಶ್ವರಸ್ವಾಮಿ ಎಂದು ಕರೆಯಲಾಗುತ್ತದೆ. ಇಲ್ಲಿಯ ತಪಸ್ವಿಗಳು ಉಪಸ್ಥಿತಿ ಮತ್ತು ಅವರು ಬರೆದ ತಾಳೆಗರಿಗಳು ಈ ಕ್ಷೇತ್ರದ ಮಹಿಮೆಗೆ ಸಾಕ್ಷಿಯಾಗಿವೆ ಎಂದು ವಿವರಿಸಿದರು.

ಈ ವೇಳೆ ಹಾಲು ಉತ್ಪಾದಕರ ಒಕ್ಕೂಟದ ಮಾಜಿ ನಿರ್ದೇಶಕ ರೇಣುಕ ಪ್ರಸಾದ್, ಹಾಲುನೂರು ಅನಂತ್ ಹಾಗೂ ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

# ಸಂಗೀತ ಸಾಧನಗಳಿಂದ ಹೊರ ಹೊಮ್ಮುವ ನಾದ, ಎಲ್ಲಾ ಮನಸ್ಸುಗಳನ್ನು ಒಂದೆಡೆಗೆ ಸೆಳೆದಿಡಬಹುದಾದ ಶಕ್ತಿ ಅಡಗಿದೆ

ತುಮಕೂರು: ತಂತಿ, ಚರ್ಮದಿಂದ ಮಾಡಿದ ಸಂಗೀತ ಸಾಧನಗಳಿಂದ ಹೊರ ಹೊಮ್ಮುವ ನಾದ, ಎಲ್ಲಾ ಮನಸ್ಸುಗಳನ್ನು ಒಂದೆಡೆಗೆ ಸೆಳೆದಿಡಬಹುದಾದ ಶಕ್ತಿ ಅಡಗಿದೆ ಎಂದು ಬೆಳ್ಳಾವೆ ಶ್ರೀಕಾರದೇಶ್ವರ ಮಠದ ಶ್ರೀಕಾರದ ವೀರಬಸವ ಮಹಾಸ್ವಾಮೀಜಿಗಳು ಅಭಿಪ್ರಾಯಪಟ್ಟಿದ್ದಾರೆ.

ಬೆಳ್ಳಾವೆಯಲ್ಲಿ ಶ್ರೀಕಾರದೇಶ್ವರ ಸ್ವಾಮಿಯಜಾತ್ರಾ ಮಹೋತ್ಸವದ ಅಂಗವಾಗಿ ರಂಗಕೀರ್ತನ ಸಂಪದ(ರಿ), ಮಲ್ಲಸಂದ್ರಅವರುಕನ್ನಡ ಮತ್ತು ಸಂಸ್ಕೃತಿಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಸಾಂಸ್ಕೃತಿಕ ಸಿರಿ ವೈಭವಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡುತಿದ್ದಅವರು, ಸಂಗೀತ ಕಲಿಯಲು ವಯಸ್ಸಿನ ಭೇಧ ಭಾವವಿಲ್ಲ.ಕೇಳುವ ಮನಸ್ಸು, ಆಸ್ವಾದಿಸುವ ಗುಣವಿರುವುದು ಮುಖ್ಯಎಂದರು.

ಪ್ರತಿ ವರ್ಷ ಶ್ರೀಕಾರದೇಶ್ವರ ಮಠದಜಾತ್ರಾ ಮಹೋತ್ಸವದ ಸಂದರ್ಭದಲ್ಲಿ ಮಳೆಯಾಗುವುದು ವಾಡಿಕೆ.ಇದೊಂದು ಶುಭ ಸೂಚನೆ,ಮಳೆ ಬಂದು ಇಳೆಯೆಲ್ಲಾ ಹಸಿರಾಗಿ, ರೈತನ ಮನೆ ತುಂಬಿದರೆಅದಕ್ಕಿಂತ ಸಮೃದ್ದಿ ಮತ್ತೊಂದಿಲ್ಲ. ಈ ಬಾರಿಯೂ ಸಣ್ಣದಾಗಿ ಮಳೆಯಾಗಿದೆ.ಯಾವುದಕ್ಕೂ ಕೊರತೆಯಾಗದು ಎಂಬ ನಂಬಿಕೆ ನಮ್ಮದು.ಇಳಿಯ ಮಯಸ್ಸಿನಲ್ಲಿಯೂ ಸಂಗೀತ, ನಾಟಕ, ಹರಿಕಥೆ,ಶಿವಕಥೆ, ಜನಕಥೆಗಳ ಮೂಲಕ ಈ ನಾಡಿನ



ಸಂಸ್ಕೃತಿ, ಪರಂಪರೆಯನ್ನು ಬಿತ್ತರಿಸುವ ಕೆಲಸ ಮಾಡುತ್ತಿರುವ ಡಾ.ಲಕ್ಷ್ಮಣದಾಸ್‌ರಂತಹವರು ಇಂದು ಶ್ರೀಮಠದ ಸಾಂಸ್ಕೃತಿಕ ಸಿರಿ ವೈಭವ ಕಾರ್ಯಕ್ರಮ ನೀಡುತ್ತಿರುವುದು ನಮ್ಮೆಗೆಲ್ಲರಿಗೂ ಹೆಮ್ಮೆಯ ವಿಚಾರಎಂದು ಶ್ರೀಕಾರದ ವೀರಬಸವ ಮಹಾಸ್ವಾಮೀಜಿ ನುಡಿದರು. ಕಾರ್ಯಕ್ರಮಕ್ಕೆ ದೀಪ ಬೆಳಗುವ ಮೂಲಕ ಚಾಲನೆ ನೀಡಿದಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಕೆ.ಎಸ್.ಸಿದ್ದಲಿಂಗಪ್ಪ ಮಾತನಾಡಿ, ಮನುಷ್ಯನಿಗೆ ಬೇಕಾದ ನೆಮ್ಮದಿ, ಶಾಂತಿ ,ತೃಪ್ತಿ ಮತ್ತು ಸಂತೋಷಯಾವುದೇ ಮಾರುಕಟ್ಟೆಯಲ್ಲಿ ಸಿಗುವುದಿಲ್ಲ. ಅವುಗಳು ಕಲೆ,ಸಾಹಿತ್ಯ,ಸಂಗೀತದಂತಹ ಲಲಿತ ಕಲೆಗಳಲ್ಲಿ ಅಡಗಿವೆ.ನಗರ ಮತ್ತು ಗ್ರಾಮೀಣ ಎಲ್ಲ ಕಡೆಗಳಲ್ಲಿಯೂ ಇವುಗಳನ್ನು ಆಶ್ರಯಿಸಿವೆ. ಸಂಗೀತಕ್ಕೆ ಯಾವುದೇ ಭಾಷೆ, ಗಡಿಗಳ ಹಂಗಿಲ್ಲ. ಅದು ಲಯ, ತಾಳಕ್ಕೆ ಬದ್ದವಾಗಿದ್ದರೆಎಲ್ಲರೂ ಆಸ್ವಾದಿಸುತ್ತಾರೆ, ಹಾಗಾಗಿ ಕಲೆಗೆ ಜಾತಿ, ಮತ, ಪಂಥ, ಭಾಷೆಯ ಮಿತಿಯಿಲ್ಲಎಂದರು.

ರಂಗಕೀರ್ತನ ಸಂಪದ(ರಿ), ಮಲ್ಲಸಂದ್ರ ಅಧ್ಯಕ್ಷರಾದ ಡಾ.ಲಕ್ಷ್ಮಣದಾಸ್ ಮಾತನಾಡಿ, ಬೆಳ್ಳಾವೆಗೆ ಐತಿಹಾಸಿಕ ಹಿನ್ನೆಲೆಯಿದೆ. ಕನ್ನಡದ ಮೊದಲ ಚಿತ್ರಸಾಹಿತಿ ಬೆಳ್ಳಾವೆ ನರಹರಿಶಾಸ್ತ್ರಿಗಳನ್ನು ಈ ನಾಡು ಮರೆಯಲು ಸಾಧ್ಯವಿಲ್ಲ.ಅದೇ ರೀತಿ ಜಿ.ಎಸ್.ಸಿದ್ದಲಿಂಗಯ್ಯ ಸಹ ಪ್ರಖ್ಯಾತರು, ಒಂದುಕಾಲದ ವ್ಯಾಪಾರಿ ಕೇಂದ್ರವಾಗಿದ್ದ ಬೆಳ್ಳಾವೆ, ಸಾಹಿತ್ಯಿಕವಾಗಿ, ಸಾಂಸ್ಕೃತಿಕವಾಗಿ ಸಾಕಷ್ಟು ಹೆಸರು ಮಾಡಿದೆ. ರಂಗಕೀರ್ತನ ಸಂಪದ(ರಿ) ಕಳೆದ 26 ವರ್ಷಗಳಿಂದ ನಾಡಿನಾದ್ಯಂತ ಸಾವಿರಾರು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನೀಡಿದೆ. ಹಲವರು ಉದಯೋನ್ಮುಖ ಕಲಾವಿದರು ಈ ಸಂಸ್ಥೆಯಿಂದ ನಾಡಿಗೆ ಪರಿಚಯವಾಗಿ, ಕಲೆಯನ್ನು ಮುಂದುವರೆಸಿಕೊಂಡು ಹೋಗಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಕಸಾಪ ತುಮಕೂರು ತಾಲೂಕುಅಧ್ಯಕ್ಷರಾದ ಚಿಕ್ಕ ಬೆಳ್ಳಾವೆ ಶಿವಕುಮಾರ್, ಪಾವಗಡ ತಾಲೂಕು ವೀರಲ ಗೊಂದಿಯ ಜಾನಪದ ಗಾಯಕರಾದ ಡಿ.ನಾಗರಾಜು, ಬೆಳ್ಳಾವೆ ಪೊಲೀಸ್ ಠಾಣೆಯ ಮಹಿಳಾ ಅಧಿಕಾರಿ ಸಾವಿತ್ರಿ ಮತ್ತಿತರರು ಪಾಲ್ಗೊಂಡಿದ್ದರು.

ವೇದಿಕೆ ಕಾರ್ಯಕ್ರಮದ ನಂತರ ನಡೆದ ಸಾಂಸ್ಕೃತಿಕ ಸಿರಿ ವೈಭವಕಾರ್ಯಕ್ರಮದಲ್ಲಿ ಕಲಾಶ್ರೀ ಡಾ.ಲಕ್ಷ್ಮಣದಾಸ್ ತಂಡದಿಂದ ಭಕ್ತಿ, ಭಾವ ರಂಜಿನಿ, ದಿಬ್ಬೂರು ಮಂಜು ಮತ್ತು ತಂಡದಿಂದ ಸುಗಮ ಸಂಗಿತ ಸಿಂಚನ, ವೀರಗೊಂದಿಯ ಡಿ.ನಾಗರಾಜು ಮತ್ತು ತಂಡದಿಂದ ಜಾನಪದ ಬಯಲಾಟ ಪದಗಳು, ಹಬ್ಬತ್ತನಹಳ್ಳಿಯ ಶ್ರೀಮತಿ ರತ್ನಮ್ಮ ಹೆಚ್.ಟಿ. ಮತ್ತು ತಂಡ ದಿಂದ ಗೀತಗಾಯನ ಧಾರೆ, ಮಧುಗಿರಿ ತಾಲೂಕು ಮಲ್ಲನಾಯಕನಹಳ್ಳಿಯ ದ್ಯಾವರಪ್ಪ ಮತ್ತು ತಂಡದಿಂದ ತತ್ವ ಪದಗಾಯನ, ಮಧುಗಿರಿಯ ಅಂಜನಮೂರ್ತಿ ಮತ್ತು ತಂಡದಿಂದ ರಂಗ ಸಂಗೀತ, ಪಾವಗಡ ತಾಲೂಕು ವೈ.ಎನ್. ಹೊಸ ಕೋಟೆಯ ಮರಿಸ್ವಾಮಿ ಮತ್ತು ತಂಡದಿಂದ ಭಜನಾವಳಿ ನಡೆದವು.

SP NEWS ಸಣ್ ಸುದ್ದಿ



ತುಮಕೂರಿನ ಸಿದ್ದಗಂಗಾ ಮಠದ ಆವರಣದಲ್ಲಿ ವಜ್ರಮಹೋತ್ಸವ ಕಟ್ಟಡದ ಮುಂಭಾಗ ನಡೆದಾಡುವ ದೇವರಾದ ಸಿದ್ದಗಂಗಾ ಮಠದ ಲಿಂಗೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ 119ನೇ ಜಯಂತಿ ಪ್ರಯುಕ್ತ ಮೈಸೂರಿನ ಕಲಾವಿದರಾದ ಪುನೀತ್, ಲಕ್ಷ್ಮಿ, ಆದಿತ್ಯ, ಹರ್ಷಿತ್ ಆರ್., ಕುಮಾರಸ್ವಾಮಿ ಕೆ.ಬಿ. ರವರು 8000 ಚದರ ಅಡಿ ವಿಸ್ತೀರ್ಣದಲ್ಲಿ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ ಭಾವಚಿತ್ರವನ್ನು ರಂಗೋಲಿಯಲ್ಲಿ ಬಿಡಿಸಿರುವುದು ನೋಡುಗರ ಕಣ್ಮನ ಸೆಳೆಯುತ್ತಿದೆ.



ತುಮಕೂರು ನಗರದ ಬಾವಿಕಟ್ಟೆ ಕಲ್ಯಾಣ ಮಂಟಪದಲ್ಲಿ ಪರಮ ಪೂಜ್ಯ ಡಾ.ಶ್ರೀ ಶಿವಕುಮಾರ ಮಹಾಸ್ವಾಮಿಗಳವರ 119ನೇ ವರ್ಷದ ಹುಟ್ಟುಹಬ್ಬದಂದು ಸ್ವಾಮೀಜಿಯವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ರಸ್ತೆಯಲ್ಲಿ ಓಡಾಡುವ ವಾಹನಗಳಿಗೆ ಮಜ್ಜಿಗೆ ವಿತರಿಸಿದರು. ಸ್ನೇಹ ಸಂಗಮ ಸೌಹಾರ್ದ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಬಿ.ಎಸ್. ಮಂಜುನಾಥ್, ಗಣೇಶ್ ಹಾಗೂ ಕುಟುಂಬದವರು, ಅಭಿಮಾನಿಗಳು ಉಪಸ್ಥಿರಿದ್ದರು



ತುಮಕೂರು ನಗರದ ಕೋತಿತೋಪಿನ ರಸ್ತೆ ಬದಿಯಲ್ಲಿ ಹೋಟೆಲ್ ವ್ಯಾಪಾರ ಮಾಡುವ ಕಿರಣ್ ಎಂಬುವರು ಡಾ.ಶ್ರೀ ಶಿವಕುಮಾರ ಮಹಾಸ್ವಾಮಿಗಳವರ 119ನೇ ಹುಟ್ಟುಹಬ್ಬದಂದು ಬಂದವರಿಗೆ ಉಚಿತವಾಗಿ ಬೆಳಗಿನ ಉಪಹಾರ ವಿತರಿಸಿದರು. ಪ್ರತಾಪ್ ಮಲ್ಲಣ್ಣ, ಗಂಗಾಧರ್, ಬಸವರಾಜು, ದರ್ಶನ್, ಎಂ.ಪಿ.ಗಂಗಾಧರ್ ಮುಂತಾದವರಿದ್ದರು.



"ತಿಪಟೂರು: ನಗರದ ಹಾಸನ ಸರ್ಕಲ್ ನಂದಿನಿ ಹಾಲಿನ ಡೈರಿ ಬಳಿ ಡಾಕ್ಟರ್ ಶಿವಕುಮಾರ್ ಸ್ವಾಮೀಜಿಯವರ 119ನೇ ಜಯಂತಿ ಹಾಗೂ ಗುರುವಂದನ ಮಹೋತ್ಸವವನ್ನು ಕಾರ್ಯಕ್ರಮವನ್ನು ಸಿಹಿ ಹಂಚುವುದರ ಮೂಲಕ ಹಾಚರಿಸಲಾಯಿತು ಈ ಸಂದರ್ಭದಲ್ಲಿ ಸಂಪಾದಕರಾದ ಭಾಸ್ಕರಾಚಾರ್ ಆರ್ ವಿ ನಟರಾಜ್. ಆಡಿಟರ್ ಈಶ್ವರ್. ಮುಂತಾದವರು ಹಾಜರಿದ್ದರು "



ಮಧುಗಿರಿ: ತಾಲೂಕಿನ ಬಡವನಹಳ್ಳಿ ಗ್ರಾಮದಲ್ಲಿ ಶ್ರೀಲಕ್ಷ್ಮಿ ರಂಗನಾಥ ಸ್ವಾಮಿಯ ಬ್ರಹ್ಮ ರಥೋತ್ಸವವು ಅದ್ದೂರಿಯಾಗಿ ನಡೆಯಿತು. ಸಾವಿರಾರು ಭಕ್ತರು ಜಾತ್ರೆಯಲ್ಲಿ ಪಾಲ್ಗೊಂಡು ಪೂಜಾ ಕೈಂಕರ್ಯ ನೆರವೇರಿಸಿ ಹರಕೆ ತೀರಿಸಿಕೊಂಡರು. ತೇರಿಗೆ ಧವನ, ಬಾಳೆಹಣ್ಣು ಹೂವು ಎಸೆಯುತ್ತಿದ್ದ ದೃಶ್ಯ ಸಾಮಾನ್ಯವಾಗಿತ್ತು. ಜಾತ್ರಾ ಮಹೋತ್ಸವಕ್ಕೆ ದೂರದ ಊರುಗಳಿಂದ ಮಾತ್ರವಲ್ಲದೆ ಪಕ್ಕದ ಆಂದ್ರ ಪ್ರದೇಶದ ಭಕ್ತರು ಆಗಮಿಸಿದ್ದರು. ಬಡವನಹಳ್ಳಿ ಪೊಲೀಸ್ ಠಾಣೆಯ ಸಿಬ್ಬಂದಿ ರಥೋತ್ಸವದ ಸಂದರ್ಭದಲ್ಲಿ ಸೂಕ್ತ ಬಂದೋಬಸ್ತ್ ಕಲ್ಪಿಸಿ ಯಶಸ್ವಿಗೊಳಿಸಿದರು.



ಸರ್ಕಾರಿ ಪ್ರಥಮ ದರ್ಜೆ ಕಾಲೇಜು ತಿಪಟೂರಿನಲ್ಲಿ ತ್ರಿವಿಧ ದಾಸೋಹಿ, ಲಿಂಗೈಕ್ಯ ಡಾ.ಶಿವಕುಮಾರ ಸ್ವಾಮೀಜಿ ಅವರ ಜನ್ಮ ದಿನ ಆಚರಿಸಲಾಯಿತು. ಪ್ರಾಂಶುಪಾಲರಾದ ಡಾ.ಶಶಿಕುಮಾರ್. ಎಚ್.ಸಿ ಸೇರಿದಂತೆ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

# ದೇಶದ ಜಿಡಿಪಿಯ ಬೆಳವಣಿಗೆಯಲ್ಲಿ ಸಾಫ್ಟ್ ವೇರ್ ಕ್ಷೇತ್ರದ ಕೊಡುಗೆ ಅಪಾರ



ತುಮಕೂರು: ನಮ್ಮ ದೇಶದ ಜಿಡಿಪಿಯ ಬೆಳವಣಿಗೆಯಲ್ಲಿ ಸಾಫ್ಟ್ ವೇರ್ ಕ್ಷೇತ್ರದ ಕೊಡುಗೆ ಸಾಕಷ್ಟಿದೆ, ಅಭಿವೃದ್ಧಿಯ ಸ್ಪರ್ಧೆಯಲ್ಲಿರುವ ಪ್ರಪಂಚದಲ್ಲಿ ನಮ್ಮ ದೇಶ ಬೇರೆ ದೇಶಗಳೊಂದಿಗೆ ಸ್ಪರ್ಧೆಯ ಮುಂಚೂಣಿಯಲ್ಲಿ ಇದೆ ಎಂದರೆ ಅದಕ್ಕೆ ಮುಖ್ಯ ಕಾರಣ ಭಾರತದಲ್ಲಾದ ತಂತ್ರಜ್ಞಾನದ ಕ್ಷೇತ್ರದಲ್ಲಾದ ಬೆಳವಣಿಗೆಯಿಂದ ಎಂದು ಸಾಹೇ ವಿವಿಯ ಕುಲಾಧಿಪತಿಗಳು ಹಾಗೂ ರಾಜ್ಯದ ಗೃಹ ಸಚಿವರಾದ ಡಾ. ಜಿ. ಪರಮೇಶ್ವರ್ ತಿಳಿಸಿದರು.

ನಗರದ ಹೊರವಲಯದಲ್ಲಿರುವ ಕ್ಯಾತ್ಸಂತ್ರದ ಶ್ರೀ ಸಿದ್ಧಾರ್ಥ ಸ್ಕೂಲ್ ಆಫ್ ಇಂಜಿನಿಯರಿಂಗ್ ಕಾಲೇಜಿನಲ್ಲಿ ಆಯೋಜಿಸಿದ್ದ ಹಳೇ ವಿದ್ಯಾರ್ಥಿಗಳ ಸಮಾಗಮ "ಐಕ್ಯಂ" ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಇಂಜಿನಿಯರ್‌ಗಳು ಭಾರತವನ್ನು ಬಲಿಷ್ಟ ಭಾರತವನ್ನಾಗಿ ಮಾಡಲು ಬಹಳಷ್ಟು ಶ್ರಮಿಸುತ್ತಿದ್ದಾರೆ. ಇಂಜಿನಿಯರ್ಸ್ ಗಳು ಅಭಿವೃದ್ಧಿಯ ಯೋಜನೆಯ ಕನಸನ್ನು ಕಂಡು ಅದನ್ನು ನನಸಾಗಿಸಲು ಪ್ರತಿನಿತ್ಯ ದುಡಿಯುತ್ತಿದ್ದಾರೆ. ಇಂದು ಹೆಚ್ಚಾಗುತ್ತಿರುವ ಕೃತಕ ಬುದ್ಧಿಮತ್ತೆಯು ಜಗತ್ತನ್ನು ಆಳುತ್ತವೆ, ಇದನ್ನು ನಮ್ಮೊಂದಿಗೆ ಅಳವಡಿಸಿಕೊಂಡು ಮುಂದೆ ಸಾಗಿದರೆ ನಮ್ಮ ವೇಗ ಹೆಚ್ಚುತ್ತದೆ ಎಂದು ಹೇಳಿದರು.

ಸರ್ಕಾರಗಳು ಯೋಜನೆಗಳನ್ನು ಸಿದ್ದಗೊಳಿಸುವಾಗ ಯಾವಾಗಲೂ ಮುಂದಿನ ತಲೆಮಾರುಗಳನ್ನು ಗಮನದಲ್ಲಿ ಇಟ್ಟುಕೊಂಡು ಯೋಜನೆಯನ್ನು ಸಿದ್ದಪಡಿಸುತ್ತದೆ. ಆದರೆ ಇಂದು ಯುವಜನತೆ ಚಿಂತನೆಗಳು ಸಾಕಷ್ಟು ರೀತಿಯಲ್ಲಿ ಬದಲಾವಣೆಯಾಗುತ್ತಿದೆ ಯುವಜನತೆ ಅತೀ ವೇಗವಾಗಿ ಕೆಟ್ಟ ಕೆಲಸಗಳಿಗೆ ಆಕರ್ಷಿತರಾಗುತ್ತಿರುವುದು ವಿಪರ್ಯಾಸ. ಇವರನ್ನು ತಿದ್ದಿ ತೀಡಿ ಸರಿದಾರಿಗೆ ತರುವ ಕೆಲಸಗಳಾಗಬೇಕು ಇಲ್ಲವಾದರೆ ಮುಂದಿನ ಜನಾಂಗ ತೊಂದರೆಯಾಗುತ್ತದೆ ಎಂದು ಡಾ. ಜಿ. ಪರಮೇಶ್ವರ್ ಕಳವಳ ವ್ಯಕ್ತಪಡಿಸಿದರು.

ಹಳೇ ವಿದ್ಯಾರ್ಥಿಗಳು ನಮ್ಮ ಕಾಲೇಜಿನ ರಾಯಬಾರಿಗಳು, ಹಳೇ ವಿದ್ಯಾರ್ಥಿಗಳು ಕಾಲೇಜಿನ ಹೆಸರನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ನಿಲ್ಲುವಂತೆ ನೋಡಿಕೊಳ್ಳುವವರು. ಹಳೇ ವಿದ್ಯಾರ್ಥಿಗಳು ಪ್ರತೀ ವರ್ಷವೂ ಕಾಲೇಜಿಗೆ ಹಿಂತಿರುಗಿ ತಮ್ಮ ಶೈಕ್ಷಣಿಕ ಸಲಹೆಗಳನ್ನು ನೀಡುವುದರ ಮೂಲಕ ಕಾಲೇಜಿನ ಬೆಳವಣಿಗೆಗೆ ಸಹಕಾರಿಯಾಗಿರಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಹಳೇವಿದ್ಯಾರ್ಥಿಗಳು ತಮ್ಮ ಕಾಲೇಜಿನ ಹಳೇ ನೆನಪುಗಳನ್ನು ಹಂಚಿಕೊಂಡು ಸಂಭ್ರಮಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಡಾ. ಸಂಜೀವ್ ಕುಮಾರ್, ಹಳೇ ವಿದ್ಯಾರ್ಥಿಗಳಾದ ನವ್ದೀಪ್ ಕೌರ್, ಚಂದ್ರಶೇಖರ್, ಚೇತನ್, ಕಿರಣ್, ಶ್ರೀನಿವಾಸ್‌ಮೂರ್ತಿ, ಸಂಯೋಜಕರಾದ ರೇಖಾ, ಹಾಗೂ ಎಲ್ಲಾ ವಿಭಾಗದ ಪ್ರಾಧ್ಯಾಪಕರು, ಆಡಳಿತ ವರ್ಗದವರು,

# ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ)

## ವಾರ್ಷಿಕ ಪ್ರಶಸ್ತಿ ಪಡೆದ ಜಿಲ್ಲೆಯ ಪ್ರಶಸ್ತಿ ಪುರಸ್ಕೃತರಿಗೆ ಅಭಿನಂದನೆಗಳು




## ಶ್ರೀ ಶಿವಕುಮಾರ ಮಹಾಸ್ವಾಮಿಗಳ 119ನೇ ಜಯಂತಿ

ತುಮಕೂರು ನಗರದ ವೀರಶೈವ ಸಹಕಾರ ಬ್ಯಾಂಕ್ ಮುಂಭಾಗದಲ್ಲಿ ಶ್ರೀ ಶ್ರೀ ಶಿವಕುಮಾರ ಮಹಾಸ್ವಾಮಿಗಳ 119ನೇ ಜಯಂತಿಯನ್ನು ದಾಸೋಹ ಕಾರ್ಯಕ್ರಮದ ಮೂಲಕ ಅದ್ದೂರಿಯಾಗಿ ಆಚರಿಸಲಾಯಿತು.ಈ ಸಂದರ್ಭದಲ್ಲಿ ಮಾತನಾಡಿದ ವೀರಶೈವ ಬ್ಯಾಂಕ್ ಅಧ್ಯಕ್ಷರಾದ ಕೆ.ಜೆ. ರುದ್ರಪ್ಪ, ಪ್ರತಿ ವರ್ಷದಂತೆ ಈ ವರ್ಷವೂ ಸಹ ಬ್ಯಾಂಕ್ ಆವರಣದಲ್ಲಿ ನಮ್ಮ ಆರಾಧ್ಯ ದೈವವಾದ ಶ್ರೀ ಶಿವಕುಮಾರ ಸ್ವಾಮೀಜಿಯವರ ಜಯಂತಿಯನ್ನು ಆಚರಿಸುತ್ತಿದ್ದೇವೆ ಎಂದು ಹೇಳಿದರು. ಇದೇ ದಿನ ತುಮಕೂರಿಗೆ ಭಾರತದ ರಾಷ್ಟ್ರಪತಿಗಳಾದ ದ್ರೌಪದಿ ಮುರ್ಮು ಅವರು ಆಗಮಿಸಿರುವುದು ಜಿಲ್ಲೆಯ ಜನತೆಗೆ ಹಬ್ಬದ ವಾತಾವರಣವನ್ನು ತಂದಿದೆ ಎಂದು ತಿಳಿಸಿದರು. ಕೆಲವು ಅನಿವಾರ್ಯ ಪರಿಸ್ಥಿತಿಗಳ ಹಿನ್ನೆಲೆಯಲ್ಲಿ ಈ ಬಾರಿ ಸಿಹಿ ವಿತರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಪ್ರತಿ ವರ್ಷವೂ ಜಯಂತಿಯನ್ನು ಹಬ್ಬದ ರೀತಿಯಲ್ಲಿ ಆಚರಿಸಲಾಗುತ್ತದೆ ಎಂದು ಹೇಳಿದರು.

ನಂತರ ಮಾತನಾಡಿದ ಬ್ಯಾಂಕ್ ಉಪಾಧ್ಯಕ್ಷರಾದ ಕೆ. ಮಲ್ಲಿಕಾರ್ಜುನಯ್ಯ, ರಾಜ್ಯದಾದ್ಯಂತ ಈ ದಿನವನ್ನು ದಾಸೋಹ ದಿನವಾಗಿ ಆಚರಿಸಲಾಗುತ್ತಿದ್ದು, ಪ್ರತಿ ಹಳ್ಳಿಯಲ್ಲಿಯೂ ಶ್ರೀಮಠದ ಭಕ್ತರು ದಾಸೋಹ ನಡೆಸುವ ಮೂಲಕ ಶಿವಕುಮಾರ ಸ್ವಾಮೀಜಿಯವರ 119ನೇ ಜಯಂತಿಯನ್ನು ಹಬ್ಬದ ರೀತಿಯಲ್ಲಿ ಆಚರಿಸುತ್ತಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬ್ಯಾಂಕ್ ಅಧ್ಯಕ್ಷರಾದ ಕೆ.ಜೆ. ರುದ್ರಪ್ಪ, ಉಪಾಧ್ಯಕ್ಷರಾದ ಕೆ. ಮಲ್ಲಿಕಾರ್ಜುನಯ್ಯ, ನಿರ್ದೇಶಕರು, ಪದಾಧಿಕಾರಿಗಳು, ಬ್ಯಾಂಕಿನ ಸಿಬ್ಬಂದಿ ವರ್ಗದವರು ಹಾಗೂ ಗ್ರಾಹಕರು ಉಪಸ್ಥಿತರಿದ್ದರು. ಸಂಸ್ಥೆಯ ಸದಸ್ಯರಾದ ಶ್ರೀಮತಿ ಕುಸುಮಶ್ರೀನಿವಾಸ್ ರವರು ಉಪಸ್ಥಿತರಿದ್ದು ಪ್ರಶಿಕ್ಷಣಾರ್ಥಿಗಳಿಂದ ಐದು ತಂಡಗಳಲ್ಲಿ ನಾಟಕಗಳಾದ ರಕ್ತದಾನ–ಜೀವದಾನ, ಬಿಲ್ಲ ಹಬ್ಬ, ಅರಳುವ ಹೂಗಳು ಮುಂತಾದ ನಾಟಕಗಳನ್ನು ಪ್ರದರ್ಶಿಸಲಾಯಿತು.

## ವಿಶ್ವ ಕರಡಿ ದಿನಾಚರಣೆ ಅಂಗವಾಗಿ ಜಾಗೃತಿ ಕಾರ್ಯಕ್ರಮ



ಮಧುಗಿರಿ: ವನ್ಯಜೀವಿಗಳು ಪ್ರಕೃತಿಯ ಸಮತೋಲನ ಕಾಪಾಡುವಲ್ಲಿ ಮಹತ್ವದ ಪಾತ್ರವಹಿಸುತ್ತವೆ. ವನ್ಯಜೀವಿಗಳ ಸಂರಕ್ಷಣೆ ಎಲ್ಲರ ಜವಾಬ್ದಾರಿ ಎಂದು ವಲಯ ಅರಣ್ಯಾಧಿಕಾರಿ ಸುರೇಶ್ ತಿಳಿಸಿದ್ದಾರೆ.

ವಿಶ್ವ ಕರಡಿ ದಿನಾಚರಣೆ ಅಂಗವಾಗಿ ಪಟ್ಟಣದಲ್ಲಿ ಅರಣ್ಯ ಇಲಾಖೆ ಮತ್ತು ಐಟಿಐ ಕಾಲೇಜಿನ ವಿದ್ಯಾರ್ಥಿಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ಕರಡಿಗಳ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಅರಣ್ಯ ನಾಶ ಹಾಗೂ ಮಾನವ ಚಟುವಟಿಕೆಗಳ ಹೆಚ್ಚಳದಿಂದ ಕಾಡುಪ್ರಾಣಿಗಳು ಸಂಕಷ್ಟಕ್ಕೆ ಸಿಲುಕುತ್ತಿವೆ. ಪರಿಸರ ಸಂರಕ್ಷಣೆ ಕುರಿತು ಜನರಲ್ಲಿ ಜಾಗೃತಿ ಅಗತ್ಯವಾಗಿದೆ ಎಂದರು.

ಕರಡಿಗಳ ಸಂರಕ್ಷಣೆ ಹಾಗೂ ಪರಿಸರ ರಕ್ಷಣೆಯ ಮಹತ್ವವನ್ನು ಜನರಿಗೆ ತಿಳಿಸುವ ಉದ್ದೇಶದಿಂದ ವಿದ್ಯಾರ್ಥಿಗಳು ಕಾಲ್ನಡಿಗೆ ಜಾಗೃತಿ ರ್‍ಯಾಲಿ ನಡೆಸಿದರು. ಪಟ್ಟಣದ ದಂಡಿನ ಮಾರಮ್ಮ ದೇವಸ್ಥಾನದಿಂದ ಆರಂಭವಾದ ರ್‍ಯಾಲಿ ತುಮಕೂರು ಗೇಟ್ ವರೆಗೆ ಸಾಗಿತು. ಈ ವೇಳೆ ವಿದ್ಯಾರ್ಥಿಗಳು ಕರಡಿಗಳ ಸಂರಕ್ಷಣೆ, ಅರಣ್ಯ ರಕ್ಷಣೆ ಮತ್ತು ಪರಿಸರ ಕಾಪಾಡುವ ಕುರಿತು ಘೋಷಣೆಗಳನ್ನು ಕೂಗಿ ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು.

ಜಾಗೃತಿ ರ್‍ಯಾಲಿ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಸಾರ್ವಜನಿಕರ ಗಮನ ಸೆಳೆಯಿತು. ಕಾರ್ಯಕ್ರಮದಲ್ಲಿ ವಲಯ ಅರಣ್ಯ ಅಧಿಕಾರಿ ಮುತ್ತುರಾಜ್, ಹಾಗೂ ಸಿಬ್ಬಂದಿ, ಐಟಿಐ ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

# ವ್ಯಕಿತ್ವ ವಿಕಾಸನಕ್ಕೆ ನಾಟಕ ಸಹಕಾರಿ



ಮಧುಗಿರಿ:ವ್ಯಕ್ತಿತ್ವ ವಿಕಾಸನಕ್ಕೆ ನಾಟಕ ಸಹಕಾರಿಯೆಂದು ನಿವೃತ್ತ ಪ್ರಾಂಶುಪಾಲ ಡಿ ಎಸ್ ಮುನೀಂದ್ರ ಕುಮಾರ್ ಅಭಿಪ್ರಾಯಪಟ್ಟರು. ಪಟ್ಟಣದ ಶ್ರೀ ಟಿ.ವಿ.ವಿ. ಶಿಕ್ಷಣ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಶಿಕ್ಷಣದಲ್ಲಿ ರಂಗ ಕಲೆಯ ಮಹತ್ವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಮಕ್ಕಳಲ್ಲಿ ಇರುವ ಸುಪ್ತ ಪ್ರತಿಭೆಯನ್ನು ಹೊರಗೆಳೆಯಲು ರಂಗಭೂಮಿ ಸಹಕಾರಿ ಎಂದರಲ್ಲದೆ ಪಾಠ ಮಾಡುವ ಶಿಕ್ಷಕರು ತೋರುವ ಹಾವ-ಭಾವಗಳು ಶಾಬ್ದಿಕ ಮತ್ತು ಅಶಾಬ್ದಿಕತೆಗಳು ಮಕ್ಕಳ ಮನಸ್ಸನ್ನು ಮಿಡಿದು ಜ್ಞಾನ ಸ್ವೀಕಾರಕ್ಕೆ ಸಿದ್ಧಗೊಳಿಸುತ್ತವೆ ಎಂದರು.

ನೀನಾಸಂ ತರಬೇತಿ ಪಡೆದ ರಂಗ ಶಿಕ್ಷಕ ಭಾನುಪ್ರಕಾಶ್ ಮಾತನಾಡಿ ನಾಟಕ ಸಂಕೀರ್ಣವಾದ ಕಲೆ, ಸಂಗೀತ ಸಾಹಿತ್ಯ, ನೃತ್ಯ ಎಲ್ಲಾ ಪ್ರಕಾರಗಳನ್ನು ಸಂಪೂರ್ಣವಾಗಿ ಒಳಗೊಂಡಿದ್ದು ನಟ ಮತ್ತು ಶಿಕ್ಷಕ ಇಬ್ಬರಲ್ಲೂ ಸಾಮೀಪ್ಯವಿದ್ದು ನಾಟಕಗಳಿಂದ ಏಕಾಗ್ರತೆ ನೆನಪಿನ ಶಕ್ತಿ ಹೆಚ್ಚಿ ಸಹಕಾರ ಸಹಬಾಳ್ವೆಗೆ ನೆರವಾಗುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ.ಶಿವಕುಮಾರ ಸ್ವಾಮಿ ಮಾತನಾಡಿ ಮನೋವೈಜ್ಞಾನಿಕವಾಗಿ ಉತ್ತಮ ರೀತಿಯ ಸಂವಹನವನ್ನು ರೂಡಿಸಿಕೊಂಡರೆ ಪರಿಣಾಮಕಾರಿಯಾಗಿ ಶಿಕ್ಷಣ ಸಂವಹನಗೊಳ್ಳುತ್ತದೆ ಹಾಗೂ ನಾಟಕವು ಯುವ ಪೀಳಿಗೆಗೆ ಅವಶ್ಯಕತೆ ಮತ್ತು ವಿದ್ಯಾರ್ಥಿಗಳ ಗಮನವನ್ನು ಕೇಂದ್ರೀಕರಿಸಿಕೊಂಡರೆ ಶಿಕ್ಷಣ ಉತ್ತಮವಾಗಿ ಒಡಮೂಡುತ್ತದೆ ಎಂದರು.

ಸಂಸ್ಥೆಯ ಸದಸ್ಯರಾದ ಕುಸುಮಶ್ರೀನಿವಾಸ್ ರವರು ಉಪಸ್ಥಿತರಿದ್ದು ಪ್ರಶಿಕ್ಷಣಾರ್ಥಿಗಳಿಂದ ಐದು ತಂಡಗಳಲ್ಲಿ ನಾಟಕಗಳಾದ ರಕ್ತದಾನ–ಜೀವದಾನ, ಬಿಲ್ಲ ಹಬ್ಬ, ಅರಳುವ ಹೂಗಳು ಮುಂತಾದ ನಾಟಕಗಳನ್ನು ಪ್ರದರ್ಶಿಸಲಾಯಿತು.

ಪ್ರಶಿಕ್ಷಣಾಥಿ9 ಶ್ವೇತಾ ಎಂ, ಶಶಿಕಲ ,ಕವಿತಾ ಬಾಯಿ ಹಾಗೂ ಕಾಲೇಜಿನ ಬೋಧಕ ಬೋಧಕೇತರರು ಉಪಸ್ಥಿತರಿದ್ದರು.

# ಶ್ರೀದೇವಿ ಶಿಕ್ಷಣ ವಿದ್ಯಾಸಂಸ್ಥೆಯ ವತಿಯಿಂದ ಶಿವಕುಮಾರ ಸ್ವಾಮೀಜಿಯವರ 119ನೇ ಜನ್ಮದಿನೋತ್ಸವದ ಭಕ್ತಿ ಸಮರ್ಪಣೆ

ತುಮಕೂರಿನ ನಡೆದಾಡುವ ದೇವರುರಾದ ಡಾ.ಶ್ರೀ ಶ್ರೀ ಶಿವಕುಮಾರ ಸ್ವಾಮೀಜಿಯವರ 119 ನೇ ಜನ್ಮದಿನೋತ್ಸವ ಶ್ರೀಗಳು ಬಡವ, ಬಲಿದ, ಜಾತಿ ಯಾವುದನ್ನು ನೋಡದೆ ಎಲ್ಲಾ ಮಕ್ಕಳಿಗೆ ಅನ್ನದಾನ, ವಸತಿಕೊಟ್ಟು ಎಲ್ಲರೂ ನಮ್ಮವರೇ ಎಂದು ಪೋಷಿಸಿ ಮಕ್ಕಳ ವಿದ್ಯಾಭ್ಯಾಸಕ್ಕೆ ಅತಿ ಹೆಚ್ಚು ಗಮನವನ್ನು ಕೊಟ್ಟು ಅವರ ಉನ್ನತ್ತ ಸ್ಥಾನಕ್ಕೆ ಏರುವಂತೆ ಮಾಡಿದ್ದಾರೆ. ಕಾಯಕವೇ ಕೈಲಾಸ ಎನ್ನುವು ಬಸವ ತತ್ವವನ್ನು ಪರಿಪೂರ್ಣವಾಗಿ ಪಾಲಿಸಿ ಶ್ರೀಗಳು ಎಲ್ಲರ ಏಳಿಗೆಗಾಗಿ ತಮ್ಮ ಜೀವನವನ್ನೇ ಪುಟಪಾಗಿ ಇಟ್ಟುಕೊಂಡಿದ್ದಾರೆ ಎಂದು ಶ್ರೀದೇವಿ ಸಮೂಹ ಶಿಕ್ಷಣ ಸಂಸ್ಥೆಯ ನಿರ್ದೇಶಕರು ಹಾಗೂ ಟ್ರಸ್ಟಿ ಡಾ.ರಮಣ್ ಆರ್ ಹುಲಿನಾಯ್ಕರ್‌ರವರು ತಿಳಿಸಿದರು.

ನಗರದ ಶ್ರೀದೇವಿ ಶಿಕ್ಷಣ ವಿದ್ಯಾಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ವತಿಯಿಂದ ಶ್ರೀ ಶಿವಕುಮಾರ ಸ್ವಾಮೀಜಿಯವರ 119 ನೇ ಜನ್ಮದಿನೋತ್ಸದ ಭಕ್ತಿ ಸಮರ್ಪಣೆ ಕಾರ್ಯಕ್ರಮವನ್ನು ಏ.1 ರಂದು ಬುಧವಾರ ಬೆಳಿಗ್ಗೆ 11 ಗಂಟೆಗೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಶ್ರೀದೇವಿ ಸಂಸ್ಥೆಯ ಮಾನವ ಸಂಪನ್ಮೂಲ ಮತ್ತು ಮಾಹಿತಿ ತಂತ್ರಜ್ಞಾನ ನಿರ್ದೇಶಕರಾದ ಎಂ.ಎಸ್.ಪಾಟೀಲ್‌ರವರು ಮಾತನಾಡುತ್ತಾ ಸಮಾಜದ ಕೆಳಸ್ತರಗಳಿಂದ ಬಂದ ಆಶಕ್ತರು, ದೀನರು, ದುರ್ಬಲರಿಗೆ ತ್ರಿವಿಧ ದಾಸೋಹಗಳಾದ ಪರಮಪೂಜ್ಯ ಡಾ.ಶ್ರೀ ಶ್ರೀ ಶಿವಕುಮಾರ ಸ್ವಾಮಿಯವರು ಅನ್ನ, ಆಶ್ರಯ ಮತ್ತು ವಿದ್ಯೆಯನ್ನು ನೀಡಿ ಅವರಲ್ಲಿ ಆತ್ಮವಿಶ್ವಾಸ ತುಂಬುವ ಸೇವೆಯನ್ನು ನಿರಂತರವಾಗಿ ಮಾಡಿದ್ದಾರೆ. ಡಾ.ಶಿವಕುಮಾರ ಸ್ವಾಮಿಗಳು ಧಾರ್ಮಿಕ, ಶೈಕ್ಷಣಿಕ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ಮಹತ್ತರ ಕಾರ್ಯಗಳಿಂದ ಸಶಕ್ತ ರಾಷ್ಟ್ರ ನಿರ್ಮಾಣಕ್ಕೆ ಅಗಣಿತ ಸೇವೆ ಸಲ್ಲಿಸಿದ್ದಾರೆ. ಡಾ.ಶ್ರೀ ಶ್ರೀ.ಶಿವಕುಮಾರಸ್ವಾಮಿಗಳ ನೂರಾರು ಕಾರ್ಯಗಳಲ್ಲಿ ನಾವು ಒಂದೆರಡೂ ಅಂಶಗಳನ್ನೂ ಪ್ರತಿಯೊಬ್ಬರೂ ಅಳವಡಿಸಿ ಕೊಳ್ಳಬೇಕು. ಶ್ರೀಸಿದ್ಧಗಂಗಾ ಮಠದಲ್ಲಿ ಪ್ರತಿನಿತ್ಯ ಸಾವಿರಾರು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ಅನ್ನ ದಾಸೋಹ ನಡೆಸುವುದು ನಿಜಕ್ಕೂ ಶ್ಲಾಘನೀಯವಾಗಿದೆ ಎಂದು ತಿಳಿಸಿದರು.



ಇದೇ ಸಂದರ್ಭದಲ್ಲಿ ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಟ್ರಸ್ಟಿ ಹಾಗೂ ನೇತ್ರತಜ್ಞರಾದ ಡಾ.ಲಾವಣ್ಯರವರು ಮಾತನಾಡುತ್ತಾ ಸಿದ್ಧಗಂಗಾ ಮಠದಲ್ಲಿ ಓದಿದ ವಿದ್ಯಾರ್ಥಿಗಳು ಇಂದು ಸರ್ಕಾರಿ, ಖಾಸಗಿ ಕಂಪನಿಗಳಲ್ಲಿ ಹಾಗೂ ದೇಶ ವಿದೇಶಗಳಲ್ಲಿ ಅತ್ಯುನ್ನತ ಹುದ್ದೆಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ. ದೀನ, ದಲಿತ, ಬಡವ, ಬಲಿದ, ಏನನ್ನು ನೋಡದೇ ಎಲ್ಲರಿಗೂ ವಿದ್ಯಾದಾನವನ್ನು ಮಾಡಿ, ಅಂಧರಿಗೂ ಶಾಲೆಯನ್ನು ತೆರೆದು ನಿರಂತರವಾಗಿ ವಿದ್ಯಾದಾನವನ್ನು ಮಾಡಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಎಂ.ಎಲ್.ಹರೇಂದ್ರಕುಮಾರ್, ಶ್ರೀದೇವಿ ವೈದ್ಯಕೀಯ ಆಡಳಿತ ವಿಭಾಗದ ಉಪಪ್ರಾಂಶುಪಾಲರಾದ ಡಾ.ಎಂ.ಎನ್.ಹೇಮಂತ್‌ರಾಜ್, ಶ್ರೀದೇವಿ ಆಸ್ಪತ್ರೆಯ ಸಿ.ಎ.ಓ ಡಾ.ಪ್ರದೀಪ್‌ಕುಮಾರ್ ವೆಗ್ಗಿ, ಶ್ರೀದೇವಿ ಆಸ್ಪತ್ರೆಯ ವೈದ್ಯಕೀಯ ಉಪಅಧೀಕ್ಷಕರಾದ ಡಾ.ಚೆನ್ನಮಲ್ಲಯ್ಯ, ಶ್ರೀದೇವಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರಾದ ಡಾ.ನರೇಂದ್ರವಿಶ್ವನಾಥ್, ಶ್ರೀದೇವಿ ಇಂಜಿನಿಯರಿಂಗ್ ಕಾಲೇಜಿನ ಡೀನ್ ಅಕಾಡೆಮಿಕ್ಸ್ ಹಾಗೂ ಉಪಪ್ರಾಂಶುಪಾಲರಾದ ಡಾ.ಎನ್.ಚಂದ್ರಶೇಖರ್ ಹಾಗೂ ವಿವಿಧ ವಿಭಾಗದ ಪ್ರಾಂಶುಪಾಲರು, ವೈದ್ಯರು, ಮುಖ್ಯಸ್ಥರು ಹಾಗೂ ಸಿಬ್ಬಂದಿವರ್ಗದವರು ಶ್ರೀಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA . SUB EDITOR- A.S.BANUPRAKASH CONTACT : 9901010109 GMAIL: suryapragathi2021@gmail.com.